# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 45 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–08–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 45 | Title- Code: KARKAN 28269 | Chitradurga | Date: 30-08-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಗೌರಸಮುದ್ರ ಮಾರಮ್ಮದೇವಿಜಾತ್ರೆ : ಪೂರ್ವಸಿದ್ಧತೆ ಪರಿಶೀಲಿಸಿದ ಶಾಸಕ 2
ಮೌಢ್ಯ ಕಂದಾಚಾರಗಳಿಗೆ ಮಕ್ಕಳ ಬಾಲ್ಯ ಬಲಿ ಕೊಡದಿರಿ: ಸಿಡಿಪಿಒ ಸುಧಾ 3
18 ತುಂಬುತ್ತಿರುವ ಸಮಯದಲ್ಲಿ ಮಗನಿಗೆ ತಂದೆಯೊಬ್ಬನ ಬುದ್ಧಿ ಮಾತುಗಳು....... 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಬಾಲ್ಯ ವಿವಾಹ: ಯುವಕನ ವಿರುದ್ಧ ಪೋಕ್ಸೋ ಪ್ರಕರಣ ದಾಖಲು

» ಚಿತ್ರದುರ್ಗ

ಹಿರಿಯೂರು ನಗರದ ಹರಿಶ್ಚಂದ್ರ ಘಾಟ್ ಬಡಾವಣೆ ಅಪ್ರಾಪ್ತ ಬಾಲಕಿಯನ್ನು ಮದುವೆಯಾದ ಹಿರಿಯೂರು ತಾಲ್ಲೂಕಿನ ರವಿ ಎಂಬ ಯುವಕನ ವಿರುದ್ಧ ಪೊಲೀಸ್ ಪ್ರಕರಣ ದಾಖಲಿಸಲಾಗಿದೆ. ಮನೆ ಭೇಟಿ ಸಂದರ್ಭದಲ್ಲಿ ಬಾಲ್ಯ ವಿವಾಹವಾಗಿರುವ ಪ್ರಕರಣ ಗಮನಕ್ಕೆ ಬಂದಿತ್ತು. ಈ ಬಗ್ಗೆ ಪರಿಶೀಲನೆ ನಡೆಸಿದ ಬಳಿಕ, ಬಾಲ್ಯ ವಿವಾಹ ನಿಷೇಧ ಹಾಗೂ ಪೋಕ್ಸೋ ಕಾಯ್ದೆಯಡಿ ಆಗಸ್ಟ್ 26 ರಂದು ಹಿರಿಯೂರು ನಗರ ಪೊಲೀಸ್ ಠಾಣೆಯಲ್ಲಿ ರವಿ ವಿರುದ್ಧ ಶಿಶು ಅಭಿವೃದ್ಧಿ ಯೋಜನೆ ಮೇಲ್ವಿಚಾರಕಿ ಪ್ರಕರಣ ದಾಖಲಿಸಿದ್ದಾರೆ. ಈ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಿತ್ರದುರ್ಗ ನಗರದ ಮಟ್ಟದ ಕ್ರೀಡಾಕೂಟ

» ಚಿತ್ರದುರ್ಗ

ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಚಿತ್ರದುರ್ಗ ನಗರ ಮಟ್ಟದ ಕ್ರೀಡಾಕೂಟವು ಆ.30 ಮತ್ತು 31ರಂದು ನಡೆಯಲಿದ್ದು, ಆ.30ರಂದು ಬೆಳಿಗ್ಗೆ 9.30ಕ್ಕೆ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಉದ್ಘಾಟನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಮ್ಯಾರಥಾನ್ ಸ್ಪರ್ಧೆ ಆಯೋಜನೆ




» ಚಿತ್ರದುರ್ಗ

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ವತಿಯಿಂದ ಯುವ ಜನೋತ್ಸವ ಅಂಗವಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಸೆಪ್ಟೆಂಬರ್ 05ರಂದು 5 ಕಿ.ಮೀ ಮ್ಯಾರಥಾನ್ ಸ್ಪರ್ಧೆ ಏರ್ಪಡಿಸಲಾಗಿದೆ. 17 ರಿಂದ 25 ವರ್ಷದ ಕಾಲೇಜು ವಿದ್ಯಾರ್ಥಿಗಳು ಮಾತ್ರ ಮ್ಯಾರಥಾನ್‌ನಲ್ಲಿ ಭಾಗವಹಿಸಬೇಕು. ಕಾಲೇಜು ಮುಖ್ಯಸ್ಥರು ನೀಡಿರುವ ಐಡಿ ಕಾರ್ಡ್, ಪತ್ರ ಕಡ್ಡಾಯವಾಗಿದೆ. ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಬೇಕಾಗುತ್ತದೆ.

**ಬಹುಮಾನದ ವಿವರ:** ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಬಹುಮಾನ ನಿಗಧಿಪಡಿಸಲಾಗಿದ್ದು, ರೂ.5000/– ಪ್ರಥಮ, 3500/– ದ್ವಿತೀಯ, 2500/– ತೃತೀಯ ಹಾಗೂ ಒಬ್ಬರಿಗೆ ರೂ.1000ದಂತೆ ಒಟ್ಟು 08 ಸಮಾಧಾನಕರ ಬಹುಮಾನ ನೀಡಲಾಗುವುದು. ಮ್ಯಾರಥಾನ್ ಸ್ಪರ್ಧೆಯು ಸೆಪ್ಟೆಂಬರ್ 05ರಂದು ಬೆಳಿಗ್ಗೆ 6.30ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಪ್ರಾರಂಭವಾಗಿ ಮುಖ್ಯವೃತ್ತ, ಪ್ರವಾಸಿ ಮಂದಿರ, ಆಸ್ಪತ್ರೆ ವೃತ್ತ ಹಾಗೂ ಒನಕೆ ಓಬವ್ವ ಸ್ಟೇಡಿಯಂ ವರೆಗೂ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ 9845674099, 9964525258, 97393943687 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ತಿಳಿಸಿದ್ದಾರೆ.

### ಮೈತ್ರಿ ತಂತ್ರ ಪ್ಲಾಪ್ ರಘುಮೂರ್ತಿ ತಂತ್ರಕ್ಕೆ ಮಕಾಡೆ ಮಲಗಿದ ಮೈತ್ರಿ

# ನಗರಸಭೆ ಆಡಳಿತ ಮತ್ತೆ ಕಾಂಗ್ರೆಸ್ ತೆಕ್ಕೆಗೆ

» ನಮ್ಮಜನ ಸಮಾಚಾರ

ಚಳ್ಳಕೆರೆ: ನಗರಸಭೆಯ ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆಗೆ ಚುನಾವಣೆ ನಡೆದಿದ್ದು, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು. ಅಧ್ಯಕ್ಷೆಯಾಗಿ ಕಾಂಗ್ರೆಸ್‌ನ ನಗರದ 31ನೇ ವಾರ್ಡ್ನ ಜೈತುಂಬಿಮಾಲೀಕ್‌ಸಾಬ್ ಚುನಾವಣೆ ಮೂಲಕ ಆಯ್ಕೆಯಾದರೆ, ಉಪಾಧ್ಯಕ್ಷೆಯಾಗಿ ಕಾಂಗ್ರೆಸ್ ಪಕ್ಷದ 8ನೇ ವಾರ್ಡ್ ಸದಸ್ಯೆ ಓ.ಸುಜಾತಪಾಲಯ್ಯ ಅವಿರೋಧವಾಗಿ ಆಯ್ಕೆಯಾದರು.

ಬಿಜೆಪಿ ಜೆಡಿಎಸ್ ಮೈಕೂಟದ ಅಭ್ಯರ್ಥಿಯಾಗಿ 1ನೇ ವಾರ್ಡ್ನ ಬಿಜೆಪಿ ಸದಸ್ಯೆ ಸಾಕಮ್ಮ ನಾಮಪತ್ರ ಸಲ್ಲಿಸಿದ್ದು 11 ಮತಗಳನ್ನು ಪಡೆದು ಪರಾಭವಗೊಂಡರೆ ಗೆದ್ದ ಅಭ್ಯರ್ಥಿ ಜೈತುಂಬಿ 18 ಮತಗಳನ್ನು ಪಡೆದರು. ಕಾಂಗ್ರೆಸ್ ಸದಸ್ಯೆ ಎಂ.ಸಾವಿತ್ರಮ್ಮ ಚುನಾವಣೆ ಪ್ರಕ್ರಿಯೆಯಿಂದ ದೂರ ಉಳಿಸಿದ್ದು, ನಾಲ್ಕನೇ ವಾರ್ಡ್ ಸದಸ್ಯ ಕೆ.ಸಿ.ನಾಗರಾಜು ನೀಡಿದ ರಾಜೀನಾಮೆ ಅಂಗೀಕೃತವಾಗಿದ್ದು, ಒಟ್ಟು 29 ಸದಸ್ಯರು ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

ಚುನಾವಣಾ ಪ್ರಕ್ರಿಯೆ ಮುಗಿದ ನಂತರ ನಗರಸಭೆಗೆ ಆಗಮಿಸಿದ ಶಾಸಕ ಟಿ.ರಘುಮೂರ್ತಿ, ನೂತನ ಅಧ್ಯಕ್ಷೆ, ಉಪಾಧ್ಯಕ್ಷೆಯನ್ನು ಅಭಿನಂದಿಸಿದರಲ್ಲದೆ, ಮತದಾನದ ನೀಡಿದ ಪಕ್ಷದ ಎಲ್ಲಾ ಸದಸ್ಯರಿಗೂ ಅಭಿನಂದನೆ ತಿಳಿಸಿ ನಗರದ ಸರ್ವತೋಮುಖ ಅಭಿವೃದ್ಧಿಗೆ ಎಲ್ಲಾ ಚುನಾಯಿತ ಸದಸ್ಯರು ಕೈಜೋಡಿಸುವಂತೆ ಮನವಿ ಮಾಡಿದರು. 2018ರಿಂದ ಇಲ್ಲಿಯವರೆಗೂ ಸತತವಾಗಿ ಕಾಂಗ್ರೆಸ್ ಪಕ್ಷ ನಗರಸಭೆಯ ಆಡಳಿತದ ಚುಕ್ಕಾಣಿಯನ್ನು ಹಿಡಿದು ನಾಗರೀಕರಿಗೆ ಉತ್ತಮ ಆಡಳಿತ ನೀಡುತ್ತಿದೆ ಎಂದರು. ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಯೂ ಸಹ ಚುನಾವಣೆಗೆ ಸ್ಪರ್ಧಿಸಿದರೂ ಅಭಿವೃದ್ಧಿ ವಿಚಾರದಲ್ಲಿ ಎಲ್ಲರೂ ಸಹಕಾರ ನೀಡುತಾರೆ ಎಂದರು.

ಪ್ರಸುತ್ತೆ ಅಧ್ಯಕ್ಷ ಸ್ಥಾನ ಬಿಸಿಎಂ(ಬಿ) ಮಹಿಳೆಗೆ ಮೀಸಲಿದ್ದು, ಪಕ್ಷದ ಏಕೈಕ ಬಿಸಿಎಂ(ಬಿ), ಮಹಿಳಾ ಅಭ್ಯರ್ಥಿ ಎಂ.ಸಾವಿತ್ರಮ್ಮ ಆದಾಯ ಮೀರಿದ ಹಿನ್ನೆಲೆಯಲ್ಲಿ ಅವರಿಗೆ ಅಗತ್ಯ ದಾಖಲಾತಿ ನೀಡದ ಹಿನ್ನೆಲೆಯಲ್ಲಿ ಬಿಸಿಎಂ(ಎ) ಮಹಿಳೆಗೆ ಅವಕಾಶ ಮಾಡಿದ್ದು, ಇದರ ಸದುಪಯೋಗವನ್ನು ಪಕ್ಷದ ಪಡೆದುಕೊಂಡಿದೆ ಎಂದರು. ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರೊಂದಿಗೆ ಚರ್ಚಿಸಿ ಅಧ್ಯಕ್ಷ, ಉಪಾಧ್ಯಕ್ಷ ಯಾರಾಗಬೇಕೆಂಬ ಬಗ್ಗೆ ಸೌಹಾರ್ದಿತವಾಗಿ ಚರ್ಚಿಸಲಾಗಿದೆ. ಸದ್ಯದ ಸ್ಥಿತಿಯಲ್ಲಿ ಯಾರಲ್ಲೂ ಅಸಮದಾನವಿಲ್ಲ ಎಂದರು.

ನೂತನ ಅಧ್ಯಕ್ಷೆ ಜೈತುಂಬಿ ಮಾತನಾಡಿ, ಶಾಸಕ ಟಿ.ರಘುಮೂರ್ತಿಯವರ ಮಾರ್ಗದರ್ಶನದಲ್ಲಿ ಅಧ್ಯಕ್ಷ ಸ್ಥಾನದ ಚುನಾವಣೆಗೆ ನಡೆದಿದ್ದು, ಶಾಸಕರು ನನ್ನ ಮೇಲೆ ವಿಶ್ವಾಸವಿಟ್ಟು ಅಧ್ಯಕ್ಷರನ್ನಾಗಿ ಮಾಡಿದ್ದಾರೆ. ಕಳೆದ ಸುಮಾರು ಏಳು ವರ್ಷಗಳ ಅವಧಿಯಲ್ಲಿ ನಗರಸಭೆಯಲ್ಲಿ ಹಲವಾರು ರೀತಿಯ ಅಭಿವೃದ್ಧಿ ಕಾಮಗಾರಿಗಳನ್ನು ಶಾಸಕ ನೇತೃತ್ವದಲ್ಲಿ ನಡೆಸಲಾಗಿದೆ. ಮುಂದಿನ ದಿನದಲ್ಲೂ ಎಲ್ಲರ ವಿಶ್ವಾಸದೊಂಧಿಗೆ ನಗರಸಭೆ ಅಭಿವೃದ್ದಿಗೆ ಶ್ರಮಿಸುವೆ ಎಂದರು.

ಉಪಾಧ್ಯಕ್ಷೆಯಾಗಿ ಆಯ್ಕೆಯಾದ ಓ.ಸುಜಾತಪಾಲಯ್ಯಮಾತನಾಡಿ,ಮೊದಲ ಬಾರಿಗೆ ನನಗೆ ನಗರಸಭೆಯಲ್ಲಿ ಉಪಾಧ್ಯಕ್ಷ ಸ್ಥಾನ ದೊರಕಿರುವುದು ಸಂತಸ ತಂದಿದೆ. ನನ್ನ8ನೇ ವಾರ್ಡ್ನ ಎಲ್ಲಾ ಸಾರ್ವಜನಿಕರನ್ನು ಅಭಿನಂದಿಸುವೆ. ನಗರದ ಅಭಿವೃದ್ಧಿ ಹಾಗೂ ಸರ್ಕಾರದ ಯೋಜನೆಗಳನ್ನು ಜಾರಿಗೆ ತಂದುಸಾರ್ವಜನಿಕರಿಗೆ ಹೆಚ್ಚಿನ ಸೌಲಭ್ಯವನ್ನು ಕೊಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವೆ. ಶಾಸಕ ಟಿ.ರಘುಮೂರ್ತಿ ಮತ್ತು ಪಕ್ಷದ ಎಲ್ಲಾ ಮುಖಂಡರು ಅಭಿನಂದಿಸುವೆ ಎಂದರು. ತಹಶೀಲ್ದಾರ್‌ರೇಹಾನ್‌ಪಾಷ,ಪೌರಾಯುಕ್ತ ಜಗರೆಡ್ಡಿ, ನಗರಸಭಾ ಸದಸ್ಯರಾದ ವೈ.ಪ್ರಕಾಶ್, ಆರ್.ರುದ್ರನಾಯಕ, ಟಿ.ಮಲ್ಲಿಕಾರ್ಜುನ್, ಕವಿತಾಬೋರಯ್ಯ, ಟಿ.ಶಿವಕುಮಾರ್, ಪ್ರಮೋದ್, ಸುಮಾ, ಎಸ್.ಜಯಣ್ಣ, ಸಿ.ಎಂ.ವಿಶುಕುಮಾರ್, ಕವಿತಾನಾಯಕಿ, ಹೊಯ್ಸಳಗೋವಿಂದ, ಸಿ.ಬಿ.ಜಯಲಕ್ಷ್ಮಿ □□, ಎಂ.ನಾಗಮಣಿ, ಸುಮಕ್ಕ, ಎಂ.ಜೆ.ರಾಘವೇಂದ್ರ, ಕವಿತಾ, ನಿರ್ಮಲ, ತಿಪ್ಪಮ್ಮ, ವಿರೂಪಾಕ್ಷಿ, ಆರ್. ಮಂಜುಳಾ, ಚಳ್ಳಕೆರೆಯಪ್ಪ, ಸಿ.ಶ್ರೀನಿವಾಸ್, ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಯ್ಯ, ಪಾಲಮ್ಮ, ಪ್ರಶಾಂತ್‌ಕುಮಾರ್, ನಾಮಿನಿ ಸದಸ್ಯರಾದ ಕೆ.ಎನ್.ನಟರಾಜ್, ಬಡಗಿಪಾಪಣ್ಣ, ಆರ್.ವೀರಭದ್ರಪ್ಪ, ಮಹಮ್ಮದ್‌ಅನ್ವರ್, ನೇತಾಜಿ ಪ್ರಸನ್ನ, ಪಿಎಸ್‌ಐ ಶಿವರಾಜ್ ಮುಂತಾದವರು ಉಪಸ್ಥಿತರಿದ್ದರು.



### ಮೈತ್ರಿ ಕೂಟಕ್ಕೆ ಮುಖಭಂಗ

ಚಳ್ಳಕೆರೆ ನಗರಸಭೆ ಚುನಾವಣೆಯಲ್ಲಿ ನಗರಸಭೆ ಸಂಖ್ಯಾಬಲ ಇಲ್ಲದಿದ್ದರು ಸಹ ಅಧ್ಯಕ್ಷ ಸ್ಥಾನಕ್ಕೆ ಅರ್ಜಿ ಹಾಕುವ ಮೂಲಕ ಕಾಂಗ್ರೆಸ್ ಗುಂಪಿನ ಸದಸ್ಯರು ನಮಗೆ ಬೆಂಬಲ ನೀಡುತ್ತಾರೆ ಎಂಬ ಮಾತು ರಾಜಕೀಯ ವಲಯದಲ್ಲಿ ಕೇಳಿ ಬಂದಿದ್ದವು ಆದರೆ ಕಾಂಗ್ರೆಸ್ ಸದಸ್ಯರನ್ನು ಒಗ್ಗಟ್ಟಿನಿಂದ ಕೊಂಡೊಯ್ಯುದ್ದ ಶಾಸಕ ಟಿ.ರಘುಮೂರ್ತಿ ಅವರು ಯಾವುದೇ ರೀತಿಯ ಅಸಮಾಧಾನ ಇಲ್ಲದಂತೆ ಬಹುಮತ ಸಾಬೀತು ಮಾಡಿ ಗೆದ್ದು ಬೀಗಿದರೇ ಮೈತ್ರಿ ಕೂಟಕ್ಕೆ ಮುಖಭಂಗವಾಗಿದೆ. ಜೆಡಿಎಸ್–ಬಿಜೆಪಿ ಮೈತ್ರಿಕೂಟದ ಸದಸ್ಯರೊಬ್ಬರುಮುಖಭಂಗಅನುಭವಿಸುವಂತಾಯಿತು.ಜೆಡಿಎಸ್–10, ಬಿಜೆಪಿ–4, ಕಾಂಗ್ರೆಸ್–17 ಸ್ಥಾನಗಳನ್ನು ಹೊಂದಿದೆ. ಆದರೆ ಜೆಡಿಎಸ್ ಪಕ್ಷದ ಇಬ್ಬರು ಸದಸ್ಯರು ಕಾಂಗ್ರೆಸ್ ಗೆ ಬೆಂಬಲಿಸಿದರು. ಮತ್ತೊಬ್ಬ ಜೆಡಿಎಸ್ ಸದಸ್ಯ ರಾಜೀನಾಮೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ಪೂರ್ಣ ಬಹುಮತದಿಂದ ಕೂಡಿದೆ. ಆದರೂ ಜೆಡಿಎಸ್, ಬಿಜೆಪಿ ಮೈತ್ರಿಕೂಟದಿಂದ ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿ ಕೊನೆ ಕ್ಷಣದಲ್ಲಿ ನಮ್ಮ ಅಭ್ಯರ್ಥಿಯೂ ಗೆಲ್ಲಬಹುದು ಎಂಬ ವಿಶ್ವಾಸ ಹೇಗೆ ಮೂಡಿತು ಎಂಬುವುದೇ ಕುತೂಹಲ. ಬಿಜೆಪಿ,ಜೆಡಿಎಸ್ ಮೈತ್ರಿ ಕೂಟದಿಂದ ಕೇವಲ 11 ಮತಗಳು ಇವೆ ಎಂದು ತಿಳಿದಿದ್ದರೂ ಸಹ ಮೊದಲನೇ ವಾರ್ಡ್ ಸದಸ್ಯೆ ಸಾಕಮ್ಮ ನಾಮಪತ್ರ ಸಲ್ಲಿಸಿದ್ದರು.

### ಬಿಸಿಎಂ ಬಿ ಪ್ರಮಾಣ ಪತ್ರ ನೀಡಬಾರದು ಎಂದು ಮೈತ್ರಿ ಸದಸ್ಯರ ದೂರು

ಚಳ್ಳಕೆರೆ ನಗರಸಭೆಯಲ್ಲಿ ಇದಕ್ಕೂ ಮುನ್ನ ಬಿಸಿಎಂ(ಬಿ) ಮೀಸಲಾತಿಗೆ ಕಾಂಗ್ರೆಸ್ ಪಕ್ಷದ ಸಾವಿತ್ರಮ್ಮನವರು ಹೆಚ್ಚಿನ ಆದಾಯದವರು ಅವರಿಗೆ ಬಿಸಿಎಂ(ಬಿ) ಪ್ರಮಾಣ ಪತ್ರ ನೀಡಬಾರದು ಎಂದು ತಹಶೀಲ್ದಾರ್ ಗೆ ಮನವಿಯನ್ನು ಸಹ ನೀಡಿದ್ದರು. ಅದರಂತೆ ಸಾವಿತ್ರಮ್ಮನವರಿಗೆ ಜಾತಿಪ್ರಮಾಣ ಪತ್ರ ನೀಡದ ಕಾರಣ ಬಿಸಿಎಂ(ಎ) ಜೈ ತುಂಬಿಗೆ ಅಧ್ಯಕ್ಷ ಸ್ಥಾನ ಒಲಿದಿದೆ.

“ ಚಳ್ಳಕೆರೆ ನಗರಸಭೆಯಲ್ಲಿ ಕಾಂಗ್ರೆಸ್ ಆಡಳಿತ ಇದ್ದು ನಮಗೆ ಬಹುಮತವಿದ್ದು ನಮ್ಮಲ್ಲಿ ಯಾವುದೇ ಅಸಮಾಧಾನವಿಲ್ಲ, ನಾವು ನಗರದ ಅಭಿವೃದ್ಧಿ ಶ್ರಮಿಸುತ್ತೇನೆ.ಅಧ್ಯಕ್ಷ ಮತ್ತು ಉಪಾಧ್ಯಕ್ಷ, ಸದಸ್ಯರು ಹಾಗೂ ವಿರೋಧ ಪಕ್ಷದವರಿಗೆ ಸಹ ನಾನು ಅಭಿವೃದ್ಧಿ ಸಹಕಾರ ನೀಡುತ್ತೇನೆ.

» **ಟಿ.ರಘುಮೂರ್ತಿ ಶಾಸಕ, ಅಧ್ಯಕ್ಷರು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ**

## ಪ್ರಮುಖ ಸುದ್ದಿ

# ಹೊಸದುರ್ಗ: ಸೆ.2ರಿಂದ ಬಿಜೆಪಿ ಸದಸ್ಯತ್ವ ಅಭಿಯಾನ

» ಹೊಸದುರ್ಗ

ಬರುವ ಸೆಪ್ಟೆಂಬರ್ 2ರಿಂದ ನಡೆಯುವ ಬಿಜೆಪಿ ಸಲ್ಲಿಸಿತ ಅಭಿಯಾನವನ್ನು ದೇಶದ ಹೆಮ್ಮೆಯ ಪ್ರಧಾನಿ ಉದ್ಘಾಟನೆಗೊಳಿಸಲಿದ್ದಾರೆ.ಬೂತ್ ಮಟ್ಟದಲ್ಲಿ ನಮ್ಮ ಜವಾಬ್ದಾರಿಯುತ ಕಾರ್ಯಕರ್ತರು ಅಭಿಯಾನವನ್ನು ಯಶಸ್ವಿಗೊಳಿಸಲು ಸಿದ್ದರಿದ್ದಾರೆ ತಾಲೂಕಿನ 242 ಬೂತ್ ಗಳಲ್ಲಿ ಹೆಚ್ಚಿನ ಕಾರ್ಯಕರ್ತರು ಸದಸ್ಯತ್ವವನ್ನು ಪಡೆದುಕೊಳ್ಳಬೇಕು ಎಂದು ರಾಜ್ಯ ಖನಿಜ ನಿಗಮ ಮಾಜಿ ಅಧ್ಯಕ್ಷ ಎಸ್ ಲಿಂಗಮೂರ್ತಿ ತಿಳಿಸಿದರು.




ನಗರದ ಜಯದೇವ ಸಮುದಾಯ ಭವನದಲ್ಲಿ ಭಾರತೀಯ ಜನತಾ ಪಾರ್ಟಿ ಹೊಸದುರ್ಗದ ಮಂಡಲ ವತಿಯಿಂದ ನಡೆದ 20 24 ನೇ ಸಾಲಿನ ಸದಸ್ಯತ್ವ ಅಭಿಯಾನ ಕಾರ್ಯಗಾರದಲ್ಲಿ ಮಾತನಾಡಿದ ಅವರು ನಾವು ಮತ್ತು ನಮ್ಮ ಕಾರ್ಯಕರ್ತರು ಒಟ್ಟುಗೂಡಿ ನಮ್ಮ ಹೊಸದುರ್ಗ ಮಂಡಲದಲ್ಲಿ ಕನಿಷ್ಠ ಒಂದು ಲಕ್ಷ ಸದಸ್ಯರನ್ನು ಮಾಡುವ ಗುರಿಯನ್ನು ಹೊಂದಿದ್ದೇವೆ. ಕಳೆದ ಪುರಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನಾಮಪತ್ರವನ್ನು ಸಲ್ಲಿಸಲು ಬಿಡದೆ ನಮ್ಮ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ ಪಕ್ಷೇತರ ಹಾಗೂ ನಮ್ಮ ಪುರಸಭಾ ಸದಸ್ಯರು ಹಾಗೂ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇವೆ. ಭಾರತ ಮತ್ತು ಚೀನಾದ ಮೇಲೆ ಧಾರ್ಮಿಕ ಮತ್ತು ಆರ್ಥಿಕ ಅವಲಂಬನೆಯನ್ನು ಪ್ರಪಂಚದ ಮುಂದುವರಿದ ದೇಶಗಳು ಅವಲಂಬಿಸಿವೆ. ಬಲಿಷ್ಠ ಭಾರತ ನಿರ್ಮಿಸಲು ಬಿಜೆಪಿಯಿಂದ ಮಾತ್ರ ಸಾಧ್ಯ ಎಂದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಮಾತನಾಡಿ ಭಾರತೀಯ ಜನತಾ ಪಕ್ಷಕ್ಕೆ ಕಾರ್ಯಕರ್ತರೇ ಬನಾದಿ, ಎಲ್ಲಾ ಕಾರ್ಯಕರ್ತರಿಗಾಗಿ ಒಬ್ಬ ಕಾರ್ಯಕರ್ತ, ಎಲ್ಲಾ ಕಾರ್ಯಕ್ರಮಗಳಿಗಾಗಿ ಒಬ್ಬ ಕಾರ್ಯಕರ್ತ ಮೀಸಲಿರುತ್ತಾನೆ. ಬಿಜೆಪಿಯಲ್ಲಿ ನಾಯಕನಿಗಿಂತ ಕಾರ್ಯಕರ್ತನಿಗೆ ಗೌರವ ಹೆಚ್ಚು. ಕಾರ್ಯಕರ್ತ ನಾಯಕನಾದರೆ ಮುಂದೆ ಆ ಕಾರ್ಯಕರ್ತ ಜನನಾಯಕನಾಗಬಲ್ಲನು.18 ಕೋಟಿ ಸದಸ್ಯರಿರುವ ಬಿಜೆಪಿ ವಿಶ್ವದಲ್ಲಿಯೇ ಬಹುದೊಡ್ಡ ರಾಜಕೀಯ ಸಂಘಟನೆಯಾಗಿದೆ. 2024 ರಲ್ಲಿ ಈ ಸದಸ್ಯತ್ವ ಅಭಿಯಾನದಲ್ಲಿ ದೇಶದ ಹೆಮ್ಮೆಯ ಪ್ರಧಾನಿ ಬರುವ ಸೆಪ್ಟೆಂಬರ್ 02 ರಂದು 8800002024 ಈ ದೂರವಾಣಿ ಸಂಖ್ಯೆಗೆ ಮಿಸ್ ಕಾಲ್ ಕೊಡುವುದರ ಮೂಲಕ ಈ ಸದಸ್ಯತಾ ಅಭಿಯಾನಕ್ಕೆ ಚಾಲನೆ ನೀಡಿ ನೀಡಲಿದ್ದಾರೆ. ನೀವು ಈ ಮೇಲಿನ ದೂರವಾಣಿ ಸಂಖ್ಯೆಗೆ ಕಾಲ್ ಮಾಡಿದ ನಂತರ ಪುನಃ ಅವರಿಂದ ನಿಮಗೆ ಕರೆ ಬಂದು ನಿಮ್ಮ ದೂರವಾಣಿ ಸಂಖ್ಯೆ ನಂತರ ಓಟಿಪಿಯನ್ನು ಹೇಳಿ ನಂತರ ನಿಮಗೆ ಸಂದೇಶದ ಮೂಲಕ ಆನ್ಲೈನ್ ನಲ್ಲಿ ಅರ್ಜಿಯ ಮೂಲಕ ಅದನ್ನು ಭರ್ತಿ ಮಾಡಬೇಕು ಕೊಡುವುದರ ಮೂಲಕ ಪುನಃ ಸದಸ್ಯನಾಗಬೇಕು. ನಮ್ಮ ಕಾರ್ಯಕರ್ತರು ಪ್ರತಿ ಬೂತ್‌ನಿಂದ ಕನಿಷ್ಠ 300 ಸಂಖ್ಯೆಯ ಸದಸ್ಯತ್ವವನ್ನು ಮಾಡಿಸಬೇಕು ಭಾರತೀಯ ಜನತಾ ಪಕ್ಷದ ತತ್ವ ಸಿದ್ಧಾಂತವನ್ನು ಒಪ್ಪಿದ 18 ವರ್ಷ ವಯಸ್ಸಿನ ನಂತರದ ಭಾರತೀಯ ಪ್ರಜೆ ಬಿಜೆಪಿ ಸದಸ್ಯತ್ವವನ್ನು ಪಡೆಯಬಹುದು. ರಾಜಕೀಯ ಹಿನ್ನೆಲೆ ಇರದ ಕುಟುಂಬದ ಯುವಕರನ್ನ ಗುರುತಿಸಿ ಸದಸ್ಯತ್ವವನ್ನು ನೀಡಿ ಮುಂದೆ ಆ ಕಾರ್ಯಕರ್ತರನ್ನು ನಾಯಕರನ್ನಾಗಿ ಮಾಡಬೇಕೆಂಬುದೇ ಪ್ರಧಾನಿ ಮೋದಿ ಅವರ ಆಶಯ ಎಂದರು. ಪ್ರಾಸ್ತಾವಿಕವಾಗಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಕೆ ಎಸ್ ಕಲ್ಮಠ ಮಾತನಾಡಿ ವಿಶ್ವದಲ್ಲಿ ಅತ್ಯಂತ ಬೃಹತ್ ಸದಸ್ಯರನ್ನು ಹೊಂದಿರುವ ಭಾರತೀಯ ಜನತಾ ಪಾರ್ಟಿ 20.24ರಲ್ಲಿ 18 ಕೋಟಿ ಕಾರ್ಯಕರ್ತರನ್ನು ಮಾಡುವ ಗುರಿ ಹೊಂದಿದ್ದು ಸೆಪ್ಟೆಂಬರ್ 15 ರಿಂದ ಈ ಅಭಿಯಾನ ಪ್ರಾರಂಭವಾಗಿ ಕಳೆದ ಲೋಕಸಭಾ ಚುನಾವಣೆಯಲ್ಲಿ ಅದ್ಭುತವಾದಜಯವನ್ನುಸಾಧಿಸಿದೇಶದಲ್ಲಿ ಅಧಿಕಾರ ಹಿಡಿದಿದೆ. ವಿಶ್ವದಲ್ಲಿಯೇ ಮಾದರಿ ಭಾರತವನ್ನ ನಿರ್ಮಾಣ ಮಾಡುತ್ತಿರುವ ನರೇಂದ್ರ ಮೋದಿ ಅವರನ್ನು ವಿಶ್ವ ನಾಯಕ ನನ್ನ ಮಾಡುವ ನಮ್ಮ ಸಂಕಲ್ಪ ಫಲಪ್ರದವಾಗಿದೆ. ಜಾತಿ ಮತ್ತು ಧರ್ಮದ ಆಧಾರದಲ್ಲಿ ಚುನಾವಣೆ ನಡೆಯುತ್ತಿವೆ. ಜಾತಿ ಧರ್ಮವನ್ನು ಬಿಟ್ಟು ರಾಷ್ಟ್ರಾದಾರದಲ್ಲಿ ಚುನಾವಣೆಗಳು ನಡುವೆ ಭಾರತಕ್ಕೆ ಭವಿಷ್ಯವಿದೆ. ಸಮೃದ್ಧ ಭಾರತವನ್ನು ಕಟ್ಟಲು ನರೇಂದ್ರ ಮೋದಿಯವರು ನಿರಂತರ ಶ್ರಮ ವಹಿಸುತ್ತಿದ್ದಾರೆ. 370 ನೇ ವಿಧಿ ಜಾರಿಗೊಳಿಸಿದೆ. ಭಾರತೀಯ ನಾಗರಿಕ ಸಂಹಿತೆ ಕಾಯಿದೆಗಳು ದೇಶದ ಸಾಮಾಜಿಕ ಪರಿವರ್ತನೆಯನ್ನು ಮಾಡುತ್ತಿವೆ.

ಕಾರ್ಯಕ್ರಮದಲ್ಲಿ ಮಂಡಲ ಪ್ರಭಾರಿ ಮಲ್ಲಿಕಾರ್ಜುನ್, ಬಿಜೆಪಿ ಮಂಡಲ ಅಧ್ಯಕ್ಷ ಗುಳಿಹಟ್ಟಿ ಜಗದೀಶ್, ಪುರಸಭಾ ಅಧ್ಯಕ್ಷರಾದ ರಾಜೇಶ್ವರಿ ಆನಂದ್, ಉಪಾಧ್ಯಕ್ಷರಾದ ಗೀತಾ ಗಜೇಂದ್ರ,ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷರಾದ ಅನುಸೂಯ ಜಗನ್ನಾಥ್, ಮಾಜಿ ಜಿ ಪಂ ಸದಸ್ಯ ಮಾವಿನಕಟ್ಟೆ ಗುರುಸ್ವಾಮಿ, ಬಿಎಸ್ ದ್ಯಾಮಪ್ಪ, ದೊಡ್ಡಘಟ್ಟ ಲಕ್ಷ್ಮಣ್, ಪರಶುರಾಮಪ್ಪ, ಮುಖಂಡರಾದ ಹೆಬ್ಬಳ್ಳಿ ಮಲ್ಲಿಕಾರ್ಜುನ್, ಕೋಡಿಹಳ್ಳಿ ತಮ್ಮಣ್ಣ,ಹೇರೂರು ಮಂಜುನಾಥ್, ಬಾಲರಾಜ್, ಶಶಿ ಶಿವನೇಕಟ್ಟೆ.ಶಿವು ಮಠ,ಶಂಕ್ರಪ್ಪ, ದೊಡ್ಡಯ್ಯ ಸರೋಜಮ್ಮ ಉಷಾ ಸಿರಿದಂತೆ ಬಿಜೆಪಿ ಕಾರ್ಯಕರ್ತರು ಹಾಜರಿದ್ದರು.

### ಜಿಲ್ಲೆಯಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ: ಜಿಲ್ಲಾಧಿಕಾರಿ

**ಚಿತ್ರದುರ್ಗ:** ರಾಜ್ಯ ಸರ್ಕಾರದ 2024–25ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ಜಿಲ್ಲೆಯಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಬೆಂಗಳೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿದೆ. ಈ ಕಾರಣದಿಂದಾಗಿ ಎನಿವೇರ್ ನೋಂದಣಿಯನ್ನು ಚಿತ್ರದುರ್ಗ ಜಿಲ್ಲೆಯ ಉಪನೋಂದಣಿ ಕಛೇರಿಗಳಿಗೂ ವಿಸ್ತರಿಸಲು ನಿರ್ಧರಿಸಲಾಗಿದೆ. ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಛೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲಾಗುತ್ತಿತ್ತು. ಎನಿವೇರ್ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಛೇರಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆ ಹೆಚ್ಚಿಸುತ್ತದೆ. ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಛೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಛೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ. ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಛೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಆ.30 ಮತ್ತು 31ರಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಕುರಿತು ಅರಿವು ಮೂಡಿಸುವ ಆಂದೋಲನ

» ಚಿತ್ರದುರ್ಗ

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇದೇ ಆಗಸ್ಟ್ 30 ಮತ್ತು 31ರಂದು ಎರಡು ದಿನ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಕುರಿತು ಅರಿವು ಮೂಡಿಸುವ ಆಂದೋಲನ ಹಮ್ಮಿಕೊಳ್ಳಲಾಗಿದೆ.
ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಜಿಲ್ಲಾ ಅಂಕಿತ ಅಧಿಕಾರಿಗಳು ಹಾಗೂ ತಾಲ್ಲೂಕು ಆಹಾರ ಸುರಕ್ಷತ ಅಧಿಕಾರಿಗಳ ನೇತೃತ್ವದಲ್ಲಿ ಸಾರ್ವಜನಿಕರಿಗೆ ಆಹಾರ ಕಲಬೆರಕೆ ಪದಾರ್ಥಗಳ ಕುರಿತು ಅರಿವು ಮೂಡಿಸುವ, ಆಹಾರ ವಹಿವಾಟುದಾರರಾದ ಹೋಟೆಲ್, ಬೇಕರಿ, ಡಾಬಾ, ಆಹಾರ ಪದಾರ್ಥಗಳ ತಯಾರಕರು, ಚಿಲ್ಲರೆ, ಸಗಟು ವಹಿವಾಟುದಾರರು, ಸಾಗಾಣಿಕೆದಾರರು, ಎಪಿಎಂಸಿ ವರ್ತಕರು, ಕಮಿಷನ್ ಏಜೆಂಟರು, ಬೀದಿ ಬದಿ ವ್ಯಾಪಾರಿಗಳು, ಮಾಂಸ, ಮೀನು ಮಾರಾಟಗಾರರು ಹಾಗೂ ಇನ್ನಿತರ ಎಲ್ಲ ಬಗೆಯ ಆಹಾರ ಪದಾರ್ಥಗಳ ವಹಿವಾಟುದಾರರಿಗೆ ಇಲಾಖೆಯಿಂದ ನೋಂದಣಿ, ಪರವಾನಗಿ ಪಡೆಯುವಂತೆ ತಿಳಿಸುವ ಮತ್ತು ಸಂಶಯುತ ಹಾಗೂ ಕಲಬೆರಕೆ ಆಹಾರ ಪದಾರ್ಥಗಳ ತಪಾಸಣೆ, ವಿಶ್ಲೇಷಣೆಗಾಗಿ ಅಂದೋನ ಆಯೋಜಿಸಲಾಗಿದೆ ಎಂದು ಜಿಲ್ಲಾ ಅಂಕಿತ ಅಧಿಕಾರಿ ಡಾ.ರಾಜಶೇಖರಾ ಪಾಳೇದವರ ತಿಳಿಸಿದ್ದಾರೆ.

### ಕ್ರೀಡೆ, ಸಾಂಸ್ಕೃತಿಕ, ರೋವರ್ಸ್ ಮತ್ತು ಎನ್‌ಎಸ್‌ಎಸ್ ಘಟಕಗಳ ಉದ್ಘಾಟನೆ ಸಮಾರಂಭ

» ಚಿತ್ರದುರ್ಗ

ಬಾಲಕರ ಸರ್ಕಾರಿ ಪ.ಪೂ. ಕಾಲೇಜು ಚಿತ್ರದುರ್ಗ ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರ ವತಿಯಿಂದ ಕ್ರೀಡಾ, ಸಾಂಸ್ಕೃತಿಕ, ರೋವರ್ಸ್ ಮತ್ತು ಎನ್.ಎಸ್.ಎಸ್. ಘಟಕಗಳ ಉದ್ಘಾಟನಾ ಸಮಾರಂಭ ಆ. 30 ರಂದು ಬೆ. 10 ಗಂಟೆಗೆ ಬಾಲಕರ ಸರ್ಕಾರಿ ಪ.ಪೂ. ಕಾಲೇಜು ಆವರಣದಲ್ಲಿ ಏರ್ಪಡಿಸಲಾಗಿದೆ. ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರು ಆದ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಕೆಡಿಪಿ ಸದಸ್ಯ ಕೆ.ಸಿ. ನಾಗರಾಜ್, ಪ.ಪೂ. ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಪುಟ್ಟಸ್ವಾಮಿ ಪಾಲ್ಗೊಳ್ಳುವರು. ಬಾಲಕರ ಸರ್ಕಾರಿ ಪ.ಪೂ. ಕಾಲೇಜು ಪ್ರಾಚಾರ್ಯ ಹೆಚ್.ಬಿ. ನರಸಿಂಹಮೂರ್ತಿ ಅಧ್ಯಕ್ಷತೆ ವಹಿಸುವರು. ಸಾಹಿತಿ ಹಾಗೂ ನಿವೃತ್ತ ಉಪನ್ಯಾಸಕಿ ಸಿ.ಬಿ. ಶೈಲಾ ಜಯಕುಮಾರ್ ವಿಶೇಷ ಉಪನ್ಯಾಸ ನೀಡುವರು. ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ಶಿವಕುಮಾರ್ ಬಿ.ಆರ್., ನರಸಿಂಹಮೂರ್ತಿ ಎನ್, ಮಂಜುನಾಥ್ ಆರ್, ಮಹೇಶ್ ಬಾಬು, ಪುಟ್ಟಮ್ಮ, ಪ್ರಶಾಂತ್ ಕುಮಾರ್ ಬಿ.ಎಂ., ಸಂತೋಷ್, ಡಾ. ಬಿ. ಕೃಷ್ಣಪ್ಪ ಸೇರಿದಂತೆ ವಿದ್ಯಾರ್ಥಿ ಪ್ರತಿನಿಧಿಗಳು ಉಪಸ್ಥಿತರಿರುವರು.

### ಪ್ರೋತ್ಸಾಹ ಧನ ಅರ್ಜಿ ಆಹ್ವಾನ

» ಚಿತ್ರದುರ್ಗ

ಮೆಟ್ರಿಕ್ ನಂತರದ ವ್ಯಾಸಂಗದಲ್ಲಿ ಮೊದಲ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಧನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಪ್ರೋತ್ಸಾಹ ಧನ ಮಂಜೂರು ಮಾಡಲು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅಭಿವೃದ್ಧಿಪಡಿಸಿರುವ https://swdservices.karnataka.gov.in/prizemoneyclientApp ಹೊಸ ವೆಬ್ ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ನಂತರ ವಿದ್ಯಾರ್ಥಿಗಳು ಸಂಬಂಧಪಟ್ಟ ಅರ್ಜಿ ಹಾಗೂ ದಾಖಲಾತಿಗಳನ್ನು ಪ್ರಾಂಶುಪಾಲರಿಂದ ದೃಢೀಕರಿಸಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ನಿಬಂಧನೆಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್‌ಗೆ ಭೇಟಿ ನೀಡುವಂತೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಕನಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸೆಪ್ಟೆಂಬರ್ 01ರಂದು ಬೆಳಿಗ್ಗೆ 10.30ಕ್ಕೆ ನಗರದ ತಾಲ್ಲೂಕು ಪಂಚಾಯತ್ ಹಿಂಭಾಗದ ಜಿಲ್ಲಾ ಸರ್ಕಾರಿ ನೌಕರರ ಭವನದಲ್ಲಿ ಚಿತ್ರದುರ್ಗ ತಾಲ್ಲೂಕಿನ ಪ್ರತಿಭಾವಂತ ಕುರುಬ ಸಮುದಾಯದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ 2023-24ನೇ ಸಾಲಿನಲ್ಲಿ ಶೇ.85 ಕ್ಕಿಂತ ಹೆಚ್ಚು ಅಂಕಪಡೆದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.
ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ತಮ್ಮ ಪೋಷಕರೊಂದಿಗೆ ಸರಿಯಾದ ಸಮಯಕ್ಕೆ ಹಾಜರಾಗಬೇಕು ಎಂದು ಚಿತ್ರದುರ್ಗ ತಾಲ್ಲೂಕು ಕನಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯದರ್ಶಿ ಹನುಮಂತಗೌಡ ಪೂಜಾರ್ ತಿಳಿಸಿದ್ದಾರೆ.

# ನೀರಾವರಿ ಸಮಿತಿಯಿಂದ ತಮಟೆ ಚಳವಳಿ

» ಚಿತ್ರದುರ್ಗ

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದ ಅನುದಾನ ತಾರದ ಜನ ಪ್ರತಿನಿಧಿಗಳ ನಿದ್ರಾವಸ್ಥೆ ಸ್ಥಿತಿ ಖಂಡಿಸಿ ಜಿಲ್ಲಾ ನೀರಾವರಿ ಅ□□□□□□□ನ ಹೋರಾಟ ಸಮಿತಿ ಗುರುವಾರ ಸಂಸದ ಗೋವಿಂದ ಕಾರಜೋಳ ಅವರ ನಿವಾಸದ ಮುಂಭಾಗ ತಮಟೆ ಚಳವಳಿ ನಡೆಸುವುದರ ಮೂಲಕ ಎಚ್ಚರಿಸುವ ಕೆಲಸ ಮಾಡಿತು.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ನೇತೃತ್ವದಲ್ಲಿ ನೇತೃತ್ವದಲ್ಲಿ ಮೆರವಣಿಗೆಯಲ್ಲಿ ಬಂದ ಕಾರ್ಯಕರ್ತರು ಜೆಸಿಆರ್ ಬಡಾವಣೆಯಲ್ಲಿರುವ ಸಂಸದರ ನಿವಾಸದ ಮುಂಭಾಗ ಧರಣಿ ನಡೆಸಿ ತಮಟೆ ಚಳವಳಿಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಗುತ್ತಿಗೆದಾರರಿಗೆ ಬಾಕಿ ಹಣ ಪಾವತಿ ಮಾಡದ ಕಾರಣ ಅವರು ಕೆಲಸ ಬಿಟ್ಟು ಹೋಗಲು ನಿರ್ಧರಿಸಿದ್ದಾರೆ. ಈಗಾಗಲೇ ನೀರಾವರಿ ನಿಗಮದ ಮುಖ್ಯ ಇಂಜಿನಿಯರ್ ಗೆ ಪತ್ರ ಬರೆದು ಅಭಿಪ್ರಾಯ ತಿಳಿಸಿದ್ದಾರೆ. ಗುತ್ತಿಗೆದಾರರ ಉಳಿಸಿಕೊಳ್ಳುವ ಪ್ರಯತ್ನಗಳು ಕಾಣಿಸುತ್ತಿಲ್ಲ. ಹಾಗೇನಾದರೂ ಅವರು ಕೆಲಸ ನಿಲ್ಲಿಸಿ ಹೋದಲ್ಲಿ ಯೋಜನೆಗೆ ಮತ್ತಷ್ಟು ಹಿನ್ನಡೆಯಾಗುತ್ತದೆ. ಗುತ್ತಿಗೆದಾರರ ತಡೆಯುವ ಕೆಲಸ ಕೇಂದ್ರ ಹಾಗೂ ರಾಜ್ಯ ಸರ್ಕಾರ ಮಾಡಲಿ ಎಂದರು. ಅಬ್ಬಿನಹೊಳಲು ಬಳಿ ಕಾಲುವೆ ನಿರ್ಮಾಣದ ಕಾಮಗಾರಿ ಪೂರ್ಣಗೊಳಿಸಲು ಸಾಧ್ಯವಾಗಿಲ್ಲ. ಜಲ ಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಮೂರು ತಿಂಗಳ ಹಿಂದೆ ಯೋಜನಾ ಪ್ರದೇಶಕ್ಕೆ ಭೇಟಿ ನೀಡಿ ಕಾಮಗಾರಿ ಪೂರ್ಣಗೊಳಿಸುವಂತೆ ತಿಳಿಸಿದ್ದರೂ ಸಾಧ್ಯವಾಗದೇ ಹೋಗಿದೆ. ಎರಡು ಸಾವಿರ ಕೋಟಿ ರುಪಾಯಿ ಬಿಲ್ ಬಾಕಿ ಇರುವುದರಿಂದ ಗುತ್ತಿಗೆದಾರರು ಕೆಲಸ ಮಾಡುತ್ತಿಲ್ಲ. ಎತ್ತಿನ ಹೊಳೆ ಯೋಜನೆಗೆ ನೀಡಿದ ಪ್ರಾಧಾನ್ಯತೆಯ ರಾಜ್ಯ ಸರ್ಕಾರ ಭದ್ರಾ ಮೇಲ್ದಂಡೆಗೆ ನೀಡುತ್ತಿಲ್ಲವೆಂದರು.



ಸಿಪಿಐ ಮುಖಂಡ ಸುರೇಶ್ ಬಾಬು ಮಾತನಾಡಿ ಭದ್ರಾ ಕಾಮಗಾರಿ ಆರಂಭವಾಗಿ 17 ವರ್ಷಗಳಾಗಿದ್ದು ಇದುರೆಗೂ ಪೂರ್ಣಗೊಂಡಿಲ್ಲ. ಜಿಲ್ಲೆಯ ಜನರ ತಾಳ್ಮೆ ಪರೀಕ್ಷಿಸಿದರೆ ಮುಂದಿನ ಪರಿಣಾಮಗಳ ಎದುರಿಸಬೇಕಾಗುತ್ತದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರ ತಕ್ಷಣವೇ ಅನುದಾನ ಬಿಡುಗಡೆ □□□□□ ಕಾಮಗಾರಿ ಪೂರ್ಣಗೊಳಿಸಬೇಕೆಂದರು .ಸರ್ವೋದಯ ಕರ್ನಾಟಕದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ ಮಾತನಾಡಿ ಚಿತ್ರದುರ್ಗ ಜಿಲ್ಲೆಗೆ ಆಳುವ ಸರ್ಕಾರಗಳು ಮೋಸ ಮಾಡಿಕೊಂಡೇ ಬಂದಿವೆ. ಕಾವೇರಿ ಕೊಳ್ಳದ ಯೋಜನೆಗಳಿಗೆ ಕೊಟ್ಟಷ್ಟು ಗಮನವ ಭದ್ರಾ ಮೇಲ್ದಂಡೆಗೆ ಕೊಡುತ್ತಿಲ್ಲ. ಈ ಭಾಗದ ರಾಜಕಾರಣಿಗಳ ಇಚ್ಛಾಶಕ್ತಿ ಕೊರತೆ ಕಾರಣಕ್ಕೆ ಜನ ನೋವು ಅನುಭವಿಸುವಂತಾಗಿದೆ ಎಂದರು.

ರೈತ ಸಂಘದ ಮುಖಂಡ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಮಾತನಾಡಿ, ಭದ್ರಾ ಮೇಲ್ದಂಡೆ ಇದವರೆಗೂ ಸುಳ್ಳು ಭರವಸೆಯಲ್ಲಿಯೇ ದಿನಗಳ ನೂಕಲಾಗುತ್ತಿದೆ. ಕಾಮಗಾರಿ ಪೂರ್ಣಗೊಳಿಸಲು ಯಾರಿಗೂ ಆಸಕ್ತಿ ಇಲ್ಲ.ನಾನು ಯುವಕನಾಗಿದ್ದಾಗ ಆರಂಭವಾದ ಚಳವಳಿ ಮೊಮ್ಮಕ್ಕಳಾದ ಮೇಲೂ ನೀರು ಬಂದಿಲ್ಲ. ರಾಜಕಾರಣದ ಅವಮಾನಕರ ಸಂಗತಿ ಇದು ಎಂದರು.

ಪ್ರತಿಭಟನಾಕಾರರ ಅಹವಾಲು ಆಲಿಸಿ ಮಾತನಾಡಿದ ಸಂಸದ ಗೋವಿಂದ ಕಾರಜೋಳ, ರಾಜ್ಯದಲ್ಲಿ ಇದುವರೆಗೂ ಆಳಿದ ಸರ್ಕಾರಗಳು ಕಾವೇರಿಗೆ ನೀಡಿದಷ್ಟು ಆದ್ಯತೆ ಕೃಷ್ಣೆಗೆ ನೀಡಿಲ್ಲ. ಈ ತಾರತಮ್ಯ ನಿವಾರಣೆಯಾಗಿಲ್ಲ. ಬಸವರಾಜ ಬೊಮ್ಮಾಯಿ ಸಿಎಂ ಆದಾಗ ಕೃಷ್ಣಾ ಕೊಳ್ಳದ ನೀರಾವರಿ ಯೋಜನೆಗಳಿಗೆ ಹೆಚ್ಚು ಅನುದಾನ ನೀಡಿದರು. ಭದ್ರಾ ಮೇಲ್ದಂಡೆಗೆ 3100 ಕೋಟಿ ನೀಡಿದ್ದರೆಂದು ಹೇಳಿದರು ಭದ್ರಾ ಮೇಲ್ದಂಡೆಗೆ ಇದುವರೆಗೂ 9500 ಕೋಟಿ ರು ಖರ್ಚಾಗಿದ್ದು ಇದರಲ್ಲಿ ಐದುವರೆ ಸಾವಿರ ಕೋಟಿ ರುಪಾಯಿಯಷ್ಟು ದೊಡ್ಡ ಮೊತ್ತವ ಬಿಜೆಪಿ ಸರ್ಕಾರ ನೀಡಿದೆ. ಉಳಿದ ಸರ್ಕಾರಗಳ ನಮ್ಮ ರೀತಿ ಬದ್ಧತೆ ಪ್ರದರ್ಶಿಸಿಲ್ಲ. ಭದ್ರಾ ಮೇಲ್ದಂಡೆಯ ರಾಷ್ಟ್ರೀಯ ಯೋಜನೆಯನ್ನಾಗಿಸುವ ನಿಟ್ಟಿನಲ್ಲಿ ರಾಜ್ಯದ ಜಲ ಸಂಪನ್ಮೂಲ ಸಚಿವನಾಗಿ ಕೇಂದ್ರಕ್ಕೆ ಪ್ರಸ್ತಾವನೆ ಒಯ್ದು ಜಲಶಕ್ತಿ ಸಚಿವರ ಕಂಡು ಎಲ್ಲ ಕಮಿಟಿಗಳ ಕ್ಲಿಯರೆನ್ಸ್ ಮಾಡಿ ಕೇಂದ್ರ ಬಜೆಟ್ ಮುಂದೆ ಕಡತ ಮಂಡಿಸಲಾಗಿತ್ತು. ಈ ಕಾರಣಕ್ಕಾಗಿಯೇರ 2023-24 ರ ಕೇಂದ್ರ ಬಜೆಟ್ ನಲ್ಲಿ 5300ಕೋಟಿ ರು ಅನುದಾನ ಕಾಯ್ದರಿಸಿಲಾಗಿತ್ತೆಂದರು. ಭದ್ರಾಗೆ ಕೇಂದ್ರ ಬಜೆಟ್ ನಲ್ಲಿ ಅನುದಾನ ಘೋಷಿಸಲಾಗಿದೆ. ಕೆಲ ತಾಂತ್ರಿಕ ಕಾರಣ ಕೇಂದ್ರ ಮುಂದಿಟ್ಟಿದೆ. ಅನುದಾನ ಪಡೆಯಲು ಪ್ರತ್ಯೇಕ ಖಾತೆ ತೆರೆಯುವಂತೆ ಸೂಚಿಸಿದೆ. ತಾವು ಮುಂದಿನ ವಾರ ಸಿಎಂ ಹಾಗೂ ಕೇಂದ್ರ ಜಲ ಶಕ್ತಿಸಚಿವರ ಜೊತೆ ಮಾತನಾಡಿ ಅನುದಾನ ಬಿಡುಗಡೆಗೆ ಪ್ರಾಮಾಣಿಕ ಪ್ರಯತ್ನಮಾಡುವೆ. ಸಿಎಂ ಸಿದ್ದರಾಮಯ್ಯ ಗುತ್ತಿಗೆದಾರರ ಬಾಕಿ ಹಣ ಪಾವತಿಸಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಹೋರಾಟಕ್ಕೆ ತಾನೂ ಕೂಡಾ ಬೆಂಬಲವಾಗಿ ನಿಲ್ಲುವುದಾಗಿ ಘೋಷಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯನ ಮಾಳಿಗೆ ಧನಂಜಯ, ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ಧನಂಜಯ, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ,ಮಾಜಿ ಅಧ್ಯಕ್ಷ ಬಸ್ತಿಹಳ್ಳಿ ಸುರೇಶ್ ಬಾಬು, ಕಾರ್ಯಾಧ್ಯಕ್ಷ ಹೊರಕೇರಪ್ಪ, ಕರುನಾಡು ಸೇನೆಯ ಶಿವಕುಮಾರ್, ಸಿಪಿಐನ ಶಿವರುದ್ರಪ್ಪ,ದೊಡ್ಡಉಳ್ಳಾರ್ತಿ ಕರಿಯಣ್ಣ, ರೈತ ಸಂಘದ ಜಿಲ್ಲಾ ಗೌರವಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ, ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಹಿರಿಯೂರು ತಾಲೂಕು ಅಧ್ಯಕ್ಷ ಬ್ಯಾಡರಹಳ್ಳಿ ಶಿವಕುಮಾರ್, ಚೇತನ ಯಳನಾಡು, ಜಾನುಕೊಂಡ ತಿಪ್ಪೇಸ್ವಾಮಿ, ಸಿದ್ದೇಶ್ ಜಾನುಕೊಂಡ, ತಾಲೂಕು ಅಧ್ಯಕ್ಷ ಇಸಾಮುದ್ರ ಪ್ರಭು, ಮುದ್ದಾಪುರ ನಾಗಣ್ಣ, ರಂಗೇಗೌಡ, ಚಿಕ್ಕಪ್ಪನಹಳ್ಳಿ ರವಿ ಕುಮಾರ್, ಚಿದಾನಂದ, ಶೇಖರ್,ಲಕ್ಷ್ಮಣರೆಡ್ಡಿ ತಮಟೆ ಚಳವಳಿಯಲ್ಲಿ ಪಾಲ್ಗೊಂಡಿದ್ದರು.

# ರಾಜಕೀಯಕ್ಕಾಗಿ ಕೆಲಸ ಮಾಡಲ್ಲ ಈ ಕ್ಷೇತ್ರದ ಅಭಿವೃದ್ಧಿಗಾಗಿ ಕೆಲಸ ಮಾಡುವೆ: ಬಸವರಾಜು

» ಚನ್ನಗಿರಿ

ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ ಜೊತೆ ಮೂಲಭೂರ್ತ ಸೌಕರ್ಯ ಕಲ್ಪಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಶಾಸಕರಾದ ಬಸವರಾಜು ವಿ ಶಿವಂಗಾ ತಿಳಿಸಿದರು. ತಾಲ್ಲೂಕಿನ ಹಟ್ಟಿ ಗ್ರಾಮದ ಸರ್ಕಾರಿ ಉರ್ದು ಹಾಗೂ ಕನ್ನಡ ಶಾಲೆಗೆ ಭೇಟಿ ಮಾಡಿ ಪರಿಶೀಲನೆ ನಡೆಸಿದದರು. ಈ ವೇಳೆ ಮಾತನಾಡಿದ ಅವರು ಶಾಲೆಯ ಜಾಗ ವಿಚಾರ ಸಂಬಂಧ ಇದ್ದ ಸಮಸ್ಯೆಗೆ ಶೀಘ್ರದಲ್ಲೇ ಪರಿಹರಿಸುವುದಾಗಿ ಭರವಸೆ ನೀಡಿದರು. ಸರ್ಕಾರಿ ಶಾಲೆ ಜಾಗ ಬೇರೆಯವರ ಹೆಸರಲ್ಲಿದ್ದ ಹಿನ್ನೆಲೆ ಕಳೆದ 15 ವರ್ಷಗಳಿಂದ ಈ ಸಮಸ್ಯೆ ಉಂಟಾಗಿದೆ, ಇದಕ್ಕೆ ಪರ್ಯಾಯ ವ್ಯವಸ್ಥೆ ಮಾಡಲಾಗುವುದು ಎಂದರು. ಶಾಲೆ ಅಭಿವೃದ್ಧಿ ದೃಷ್ಟಿಯಿಂದ ಜಾಗ ನೀಡಲು ಬಯಸಿದರೆ ಜಾಗ ಖರೀದಿಸಿ ಹೊಸ ಕಟ್ಟಡ ನಿರ್ಮಾಣ ಮಾಡುವುದರ ಜೊತೆ ಮಾದರಿ ಶಾಲೆಯನ್ನಾಗಿ ಅಭಿವೃದ್ಧಿ ಮಾಡುತ್ತೇವೆ ಎಂದು ಭರವಸೆ ನೀಡಿದರು. ನಾನು ರಾಜಕೀಯಕ್ಕಾಗಿ ಕೆಲಸ ಮಾಡಲ್ಲ ಈ ಕ್ಷೇತ್ರ ಮತ್ತು ಜನರ ಅಭಿವೃದ್ಧಿಗಾಗಿ ಕೆಲಸ ಮಾಡುವೆ ಎಂದರು. ಹಟ್ಟಿ ಗ್ರಾಮದ ಸರ್ಕಾರಿ ಶಾಲೆಗೆ ಎರಡು ನೂತನ ಕಟ್ಟಡ ನಿರ್ಮಾಣ ಮಾಡಲಾಗುವುದು. ಮಕ್ಕಳಿಗೆ ಯಾವುದೇ ಸಮಸ್ಯೆಯಾಗದಂತೆ ಉತ್ತಮ ಶಿಕ್ಷಣ ಒದಗಿಸಲು ಮೂಲಭೂತ ಸೌಕರ್ಯ ಕಲ್ಪಿಸಲಾಗುವುದು ಎಂದರು. ಮಕ್ಕಳಿಗೆ ಪ್ರಾಥಮಿಕ ಹಂತದಲ್ಲೇ ಗುಣಮಟ್ಟದ ಶಿಕ್ಷಣ ಸಿಕ್ಕರೆ ಭವಿಷ್ಯದಲ್ಲಿ ಪ್ರತಿಭಾನ್ವಿತರಾಗುತ್ತಾರೆ, ಹೀಗಾಗಿ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡುವುದು ನಮ್ಮ ಕರ್ತವ್ಯ ಎಂದರು. ತಾಲ್ಲೂಕಿನಲ್ಲಿರುವ ಹಳೇ ಮತ್ತು ಹಾಳಾದ ಕಟ್ಟಡಗಳ ದುರಸ್ತಿಗೆ ಕ್ರಮ ಕೈಗೊಳ್ಳಲಾಗಿದೆ ಹಂತ ಹಂತವಾಗಿ ಎಲ್ಲಾ ಶಾಲೆಗಳನ್ನು ಅಭಿವೃದ್ಧಿ ಮಾಡುತ್ತೇವೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಶಾಸಕರು ಶಾಲೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಇಲ್ಲಿನ ಮಕ್ಕಳು ಶಾಸಕರಿಗೆ ಪ್ರೀತಿ ತೊರುವ ಮೂಲಕ ಸಂಭ್ರಮ ವ್ಯಕ್ತಪಸಿದರು, ಈ ವೇಳೆ ಬಿಇಓ ಜಯ್ಯಪ್ಪ ಎಲ್, ಎ□□ಡಿಎಂಸಿ ಸದಸ್ಯರು ಮತ್ತು ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ಡಾ.ವೆಂಕಟೇಶ್ ಬಾಬು ರವರಿಂದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ



» ದಾವಣಗೆರೆ

ನಗರದ ಜೈನ್ ಟ್ರಿನಿಟಿ ಕಾಲೇಜ್‌ನಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ನಡೆದ ಓರಿಯೆಂಟೇಶನ್ ಕಾರ್ಯಕ್ರಮದಲ್ಲಿ, ಮುಖ್ಯ ಅತಿಥಿಗಳಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರು ಹಾಗೂ ವ್ಯಕ್ತಿತ್ವ ವಿಕಸನ ತರಬೇತುದಾರರಾದ ಡಾ. ವೆಂಕಟೇಶ್ ಬಾಬು ಎಸ್ ರವರು ಭಾಗವಹಿಸಿ, ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅವರು ತಮ್ಮ ಪ್ರೇರಣಾತ್ಮಕ ಭಾಷಣದಲ್ಲಿ ವಿದ್ಯಾರ್ಥಿಗಳಿಗೆ ಸ್ಪಷ್ಟವಾದ ಗುರಿ ಹೊಂದುವುದು,ಜೀವನದ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದು,ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ಅರಿತು ಅದರ ಪ್ರಾಮುಖ್ಯತೆಯನ್ನು ಉಳಿಸಿಕೊಳ್ಳುವ ಕುರಿತು ಮಾರ್ಗದರ್ಶನ ನೀಡಿದರು.

ತಮ್ಮ ಭಾಷಣದಲ್ಲಿ, ಅವರು ಹೆಚ್ಚಾಗಿ ಬೌದ್ಧಿಕತೆ ಮತ್ತು ನೈತಿಕತೆಯ ಮೌಲ್ಯಗಳನ್ನು ಒತ್ತಿ ಹೇಳಿದರು, "ವಿದ್ಯಾಭ್ಯಾಸವು ಕೇವಲ ಅಂಕಗಣಿತ ಅಥವಾ ವಿಜ್ಞಾನವಲ್ಲ, ಅದು ನೈತಿಕವಾದ ನಿರ್ಧಾರಗಳನ್ನು ತೆಗೆದುಕೊಳ್ಳುವ, ಮತ್ತು ಸಮಾಜಕ್ಕೆ ಸರಿಯಾದ ರೀತಿಯಲ್ಲಿ ಕೊಡುಗೆ ನೀಡುವ ಸಾಮರ್ಥ್ಯವನ್ನು ಬೆಳೆಸುವುದಾಗಿರಬೇಕು."

ಅವರ ಮಾತುಗಳು ವಿದ್ಯಾರ್ಥಿಗಳಲ್ಲಿ ಮುಂದಿನ ದಿನಗಳಲ್ಲಿ ದೇಶದ ಪರಿವರ್ತನೆಗೆ ಪ್ರಮುಖ ಪಾತ್ರವಹಿಸುವಂತಹ ನಾಯಕತ್ವದ ಗುಣಗಳನ್ನು ಬೆಳೆಸುವಲ್ಲಿ ಪ್ರೇರಣೆಯಾಗಿ ಮೂಡಿದವು.

## ಪ್ರಮುಖ ಸುದ್ದಿ

# ಗೌರಸಮುದ್ರ ಮಾರಮ್ಮದೇವಿಜಾತ್ರೆ : ಪೂರ್ವಸಿದ್ದತೆ ಪರಿಶೀಲಿಸಿದ ಶಾಸಕ ಎನ್.ವೈ.ಗೋಪಾಲಕೃಷ್ಣ

» ಚಳ್ಳಕೆರೆ

29 ತಾಲ್ಲೂಕಿನ ತಳಕು ಹೋಬಳಿ ಗೌರಸಮುದ್ರ ಶ್ರೀಮಾರಮ್ಮದೇವಿಜಾತ್ರೆ ಪೂರ್ವಸಿದ್ದತೆಗಳನ್ನು ಪರಿಶೀಲಿಸಲು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ಗುರುವಾರ ಮಾರಮ್ಮದೇವಿ ದೇವಸ್ಥಾನ ಹಾಗೂ ತುಮಲು ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಳೆದ ಶನಿವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ತೀರ್ಮಾನಿಸಿದ ಹಿನ್ನೆಲೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಹೆಚ್ಚುವರಿಯಾಗಿ ಬೋರ್ ಕೊರೆಸಲಾಗಿದ್ದು, ಸಮೃದ್ಧಿ ನೀರು ದೊರಕಿದ್ದು ಶಾಸಕರು ಭೇಟಿ ನೀಡಿ ಜಾತ್ರೆಗೆ ಆಗಮಿಸುವ ಭಕ್ತರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ತಾಲ್ಲೂಕು ಆಡಳಿತ ವ್ಯವಸ್ಥೆ ಮಾಡಿದ್ದು, ತ್ವರಿತವಾಗಿ ಸ್ಪಂದಿಸಿದ ಇಲಾಖೆ ಅಧಿಕಾರಿಗಳನ್ನು ಅಭಿನಂದಿಸಿದರು.



ಜಾತ್ರೆ ಆರಂಭವಾಗಲು ಕೇವಲ ನಾಲ್ಕು ದಿನಗಳು ಮಾತ್ರ ಉಳಿದಿದ್ದು, ಉಳಿದ ಎಲ್ಲಾ ಕೆಲಸ ಕಾರ್ಯಗಳನ್ನು ತ್ವರಿತವಾಗಿ ಪೂರೈಸುವಂತೆ ಸೂಚನೆ ನೀಡಿದರು. ಯಾವುದೇ ಸಮಸ್ಯೆ ಇದ್ದಲ್ಲಿ ಕೂಡಲೇ ಗಮನಕ್ಕೆ ತರುವಂತೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ಪೂರ್ವಸಿದ್ಧತೆಯನ್ನು ಪರಿಶೀಲಿಸಲು ಆಗಮಿಸಿದ ಶಾಸಕನ್ನು ಪಂಚಾಯಿತಿಯಿಂದ ಗೌರವಿಸಲಾಯಿತು. ಗ್ರಾಮ ಪಂಚಾಯಿತಿ ಸದಸ್ಯರಾದ ಶಶಿಕುಮಾರ್, ಈರಣ್ಣ, ಎಂ.ಚಂದ್ರಣ್ಣ, ತಿಪ್ಪೇಸ್ವಾಮಿ, ಬೊಮ್ಮಣ್ಣ, ನಾಗರಾಜ, ಪಿಡಿಓ ಹನುಮಂತರಾಜು, ಕಾಂಗ್ರೆಸ್ ಪಕ್ಷದ ಮುಖಂಡ ಆರ್.ನಾಗೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವಾಲ್ಮೀಕಿ ಸಿರಿ-2024 : ವಾಲ್ಮೀಕಿ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ವಾಲ್ಮೀಕಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ಹಾಗೂ ನಿವೃತ್ತ ನೌಕರರಿಗೆ ಅಭಿನಂದನಾ ಕಾರ್ಯಕ್ರಮವನ್ನು ಸೆ.1ರ ಭಾನುವಾರನಗರದವಾಲ್ಮೀಕಿಕಲ್ಯಾಣಮಂಟಪದಲ್ಲಿ ನಡೆಯಲಿದೆ ಎಂದು ವಾಲ್ಮೀಕಿ ಕಲ್ಯಾಣಮಂಟಪ ಟ್ರಸ್ಟ್ ಅಧ್ಯಕ್ಷ ಎಚ್.ಎಂ.ಮಲ್ಲಪ್ಪನಾಯಕ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ವಾಲ್ಮೀಕಿ ನಾಯಕ ಸಮುದಾಯದ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಶಕ್ತಿ ತುಂಬಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ನಾಯಕ ಸಮುದಾಯದ ನಿವೃತ್ತ ನೌಕರರ ಸೇವೆಯನ್ನು ಪರಿಗಣಿಸಿ ಅಭಿನಂದಿಸಲಾಗುವುದು. ವಾಲ್ಮೀಕಿ ಸಿರಿ–2024ರ ಕಾರ್ಯಕ್ರಮವಾಗಿದ್ದು, ನಾಯಕ ಸಮಾಜದ ಹಾಸ್ಟಲ್, ವಾಲ್ಮೀಕಿ ಕಲ್ಯಾಣ ಮಂಟಪ ಟ್ರಸ್ಟ್, ವಾಲ್ಮೀಕಿ ನೌಕರರ ಕ್ಷೇಮಾಭಿವೃದ್ಧಿ ಸಂಘ, ವಾಲ್ಮೀಕಿ ಮಹಿಳಾ ಸಂಘ ಇವುಗಳ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ನಡೆಯಲಿದೆ. ವಾಲ್ಮೀಕಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗೆ ಜೆ.ಟಿ.ವೀರಭದ್ರಸ್ವಾಮಿ–80503 11363, ರಘುವೀರನಾಯಕ–98804 12767, ಸಿ.ಟಿ.ವೀರೇಶ್–94486 94826, ಎಚ್.ಎಂ.ಸೂರ್ಯಪ್ರಭಾ–82176 68172, ಬೋರಣ್ಣ–97313 00869 ಸಂಪರ್ಕಿಸಲು ಮನವಿ ಮಾಡಲಾಗಿದೆ.

### ಇಂದು ಶಾಂತಿ ಸಭೆ

» **ಚಿತ್ರದುರ್ಗ**

ಗಣೇಶ ಹಬ್ಬ ಮತ್ತು ಈದ್–ಮಿಲಾದ್ ಹಬ್ಬದ ಪ್ರಯುಕ್ತ ಆಗಸ್ಟ್ 30ರ ಸಂಜೆ 4 ಗಂಟೆಗೆ ಚಿತ್ರದುರ್ಗ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಶಾಂತಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಸಭೆಗೆ ಹಿಂದೂ–ಮುಸ್ಲಿಂ ಬಾಂಧವರು, ಧಾರ್ಮಿಕ ಮುಖಂಡರು ಹಾಗೂ ಸಮಾಜದ ಮುಖಂಡರು ಭಾಗವಹಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಆಸ್ತಿ ತೆರಿಗೆ ಪಾವತಿ ಶೇ 5 ರಿಯಾಯಿತಿ ಕಾಲಾವಧಿ ವಿಸ್ತರಣೆ

» **ದಾವಣಗೆರೆ**

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ಆಸ್ತಿಗಳ ಮೇಲಿನ ಸ್ವಯಂ ಘೋಷಿತ ಆಸ್ತಿ ತೆರಿಗೆಯನ್ನು ಪಾವತಿಸಲು ಶೇ.5 ರಷ್ಟು ನೀಡುವ ರಿಯಾಯಿತಿ ಪಡೆಯುವ ಕಾಲಾವಧಿಯನ್ನು ಸೆ.14 ರವರೆಗೆ ವಿಸ್ತರಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಅವರಗೆರೆವಿ.ವಿಕೇಂದ್ರದಿಂದಹೊರಡುವಎಫ್12–ಚಿಕ್ಕನಹಳ್ಳಿ ವಿದ್ಯುತ್ ಮಾರ್ಗದಲ್ಲಿ ತುರ್ತು ಕಾಮಗಾರಿಯನ್ನು ಆ.30 ರಂದು ಕೈಗೊಳ್ಳುವುದರಿಂದ ಅಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಬಸಾಪುರ, ಹಳೇ ಚಿಕ್ಕನಹಳ್ಳಿ,ಹೊಸಚಿಕ್ಕನಹಳ್ಳಿಹಾಗೂಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ಶೈಕ್ಷಣಿಕ ಪುನಶ್ಚೇತನ ಕಾರ್ಯಾಗಾರ

» **ದಾವಣಗೆರೆ**

ಶಾಲಾ ಶಿಕ್ಷಣ ಪದವಿ ಪೂರ್ವ ಇಲಾಖೆ, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಸಮಾಜಶಾಸ್ತ್ರ ಉಪನ್ಯಾಸಕರ ವೇದಿಕೆ ಇವರ ಸಹಯೋಗದಲ್ಲಿ ಆಗಸ್ಟ್ 30 ರಂದು ಬೆಳಿಗ್ಗೆ 9.30 ಕ್ಕೆ ನಗರದ ಮಾಗನೂರು ಬಸಪ್ಪ ವಿಜ್ಞಾನ ಪದವಿ ಪೂರ್ವ ಕಾಲೇಜು, ತರಳಬಾಳು ಬಡಾವಣೆ ಇಲ್ಲಿ ಪ್ರಸಕ್ತ ಸಾಲಿನ ಶೈಕ್ಷಣಿಕ ಪುನಶ್ಚೇತನ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ಎಸ್.ಬಿ. ಕಾರ್ಯಕ್ರಮ ಉದ್ಘಾಟಿಸಿ ಪ್ರತಿಭಾ ಪುರಸ್ಕಾರ ನೀಡುವರು. ಸಮಾಜ ಶಾಸ್ತ್ರ ಉಪನ್ಯಾಸಕರ ವೇದಿಕೆಯ ಅಧ್ಯಕ್ಷರಾದ ಆರ್.ಸುರೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಗನೂರು ಬಸಪ್ಪ ಪಬ್ಲಿಕ್ ಟ್ರಸ್ಟ್ ಗೌರವ ಕಾರ್ಯದರ್ಶಿ ಶರಣ ಸಂಗಮೇಶ್ವರ ಗೌಡರು, ಜಿಲ್ಲಾ ಪದವಿ ಪೂರ್ವ ಕಾಲೇಜಿಗಳ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ರವಿ.ಸಿ.ಬಿ, ಭಾಗವಹಿಸುವರು. ವಿಶ್ವವಿದ್ಯಾನಿಲಯದ ಸಮಾಜ ಕಾರ್ಯವಿಭಾಗದ ಮುಖ್ಯಸ್ಥರಾದ ಡಾ.ಲೋಕೇಶ್ ಎಂ.ಯು., ಮಿತ್ರ ರಾಜ್ಯ ತರಬೇತುದಾರರ ಸಮೂಹದ ನಿರ್ದೇಶಕರಾದ ಸಿ.ಸಿ.ಪಾವಟೆ, ಕುಣಿಮೆಳ್ಳಿಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಅರವಿಂದ ಆರ್.ಐರಣಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು.

# ಮೌಢ್ಯಗಳಿಗೆ ಮಕ್ಕಳ ಬಾಲ್ಯ ಬಲಿ ಕೊಡದಿರಿ

» **ಚಿತ್ರದುರ್ಗ**




ಜಿಲ್ಲೆಯ ಗೊಲ್ಲರಹಟ್ಟಿಗಳಲ್ಲಿ ಇನ್ನೂ ಮೌಢ್ಯ ಹಾಗೂ ಕಂದಾಚಾರಗಳು ಇರುವುದು ಬೇಸರದ ಸಂಗತಿಯಾಗಿದೆ. ಪೋಷಕರು ಇಂತಹ ಮೌಢ್ಯ ಹಾಗೂ ಕಂದಾಚಾರಗಳ ಪ್ರಭಾವಕ್ಕೆ ಒಳಗಾಗಿ ಬಾಲ್ಯ ವಿವಾಹ ಮಾಡಬಾರದು. ಮಕ್ಕಳ ಬಾಲ್ಯ ಬಲಿ ಕೊಡಬಾರದು ಎಂದು ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸುಧಾ ಹೇಳಿದರು.

ಗುರುವಾರ ಹಿರೇಗುಂಟನೂರು ಗ್ರಾಮದ ಹುಣಸೇಕಟ್ಟೆ ಗೊಲ್ಲರಹಟ್ಟಿ ಸರ್ಕಾರಿ ಶಾಲೆಯಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾ ಸಬಲೀಕರಣ ಘಟಕ, ಭರಮಸಾಗರ ಶಿಶು ಅಭಿವೃದ್ಧಿ ಯೋಜನೆ, ಗ್ರಾಮ ಪಂಚಾಯಿತಿ ಹಾಗೂ ಭರಮಸಾಗರ ಪೊಲೀಸ್ ಠಾಣೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ಬಾಲ್ಯ ವಿವಾಹ ಮತ್ತು ಪೋಕ್ಸೋ ಕಾಯ್ದೆ ಕುರಿತ ಅರಿವು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗೊಲ್ಲರಹಟ್ಟಿಯಲ್ಲಿ ಅನಕ್ಷರತೆ ಪರಿಣಾಮ ಮಹಿಳೆಯರ ಸಾಮಾಜಿಕ ಸ್ಥಾನಮಾನ ಕಡಿಮೆಯಿದೆ. ಹೆಣ್ಣು ಮಕ್ಕಳು ಋತುಮತಿಯಾದರೆ, ಹೆರಿಗೆಯಾದರೆ ಇಂದಿಗೂ ಗ್ರಾಮದ ಹೊರಗಡೆ ಇಡುವ ಅಮಾನವೀಯ ಪದ್ದತಿ ಇರುವುದು ಖೇದಕರ. ಇದರೊಂದಿಗೆ ದಿನೇ ದಿನೇ ಹೆಚ್ಚುತ್ತಿರುವ ಬಾಲ್ಯ ವಿವಾಹ ಮತ್ತು ಬಾಲ ತಾಯಂದಿರ ಪ್ರಕರಣಗಳ ಕಳವಳ ಉಂಟು ಮಾಡುತ್ತಿವೆ ಎಂದರು.

ಭರಮಸಾಗರ ಪೊಲೀಸ್ ವೃತ್ತನಿರೀಕ್ಷಕ ಮುತ್ತುರಾಜ್ ಮಾತನಾಡಿ ಆಧುನಿಕ ಸಮಾಜದಲ್ಲೂ ಗೊಲ್ಲರಹಟ್ಟಿಗಳಲ್ಲಿ ಮೌಢ್ಯಾಚರಣೆಗಳು, ಅನಿಷ್ಠ ಪದ್ದತಿಗಳು, ಗೊಡ್ಡು ಸಂಪ್ರದಾಯಗಳ ಜೀವಂತವಾಗಿವೆ. ಬಾಲ್ಯ ವಿವಾಹ ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾದವಾಗಿದೆ. ಬಾಲ್ಯ ವಿವಾಹ ಮಾಡುವ ಪೋಷಕರು ಹಾಗೂ ಸಂಬಂದಿಗಳ ವಿರುದ್ದವೂ ಪ್ರಕರಣ ದಾಖಲಿಸಲಾಗುವುದು. ಅಪ್ರಾಪ್ತರ ಮೇಲಿನ ದೌರ್ಜನ್ಯ ತಡೆಯ ಪೋಕ್ಸೋ ಕಾಯ್ದೆ ಜಾರಿ ಮಾಡಲಾಗಿದೆ ಎಂದರು.

ಲಿಂಗತಜ್ಞೆ ಗೀತಾ.ಡಿ ಮಾತನಾಡಿ ಹದಿಹರೆಯದ ಮಕ್ಕಳು ಮದುವೆಯಾದರೆ ಆಗುವಂತಹ ಅನಾನುಕೂಲಗಳು ಮತ್ತು ಆರೋಗ್ಯ ಸಮಸ್ಯೆಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸಿದರು. ಬಾಲ್ಯ ವಿವಾಹ ಹಾಗೂ ದೌರ್ಜನ್ಯ ತಡೆಗೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಹಾಗೂ ಪೊಲೀಸ್ ಸಹಾಯವಾಣಿ ಸಂಖ್ಯೆ 112 ಕರೆ ಮಾಡುವಂತೆ ಮಾಹಿತಿ ನೀಡಿದರು.

ಜಿಲ್ಲಾ ಸಂಯೋಜಕ ಚೇತನ್ ರವರು ಬಾಲ್ಯವಿವಾಹಪ್ರತಿಜ್ಞಾವಿಧಿಬೋಧಿಸಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ.ಅಧ್ಯಕ್ಷೆ ರಾಧಮ್ಮ, ಪಿಡಿಓ ವನಜಾಕ್ಷಿ, ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ಹೈಮಾವತಿ, ಗ್ರಾ.ಪಂ.ಸದಸ್ಯ ಸಿದ್ದೇಶ್, ಮಾಜಿ ತಾ.ಪಂ ಸದಸ್ಯ ಸುರೇಶ್ ಉಪಸ್ಥಿತರಿದ್ದರು

### ನೇತ್ರದಾನ ಪಾಕ್ಷಿಕದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್

# ನೇತ್ರದಾನ ಮಾಡಿ ಅಂಧರ ಬಾಳಿಗೆ ಬೆಳಕಾಗಿ

» **ಚಿತ್ರದುರ್ಗ**



ಸತ್ತ ನಂತರವೂ ನಿಮ್ಮ ಕಣ್ಣುಗಳು ಜೀವಂತವಾಗಿರಬೇಕು ಎನ್ನುವುದಾದರೆ, ಇಂದೇ ನಿಮ್ಮ ಕಣ್ಣುಗಳನ್ನು ದಾನ ಮಾಡಿ ಅಂಧರ ಬಾಳಿಗೆ ಬೆಳಕಾಗಿ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್ ಹೇಳಿದರು.

ನಗರ ಪದ್ಮಾವತಿ ಕಾಲೇಜ್ ಆಫ್ ನರ್ಸಿಂಗ್ ಸೈನ್ಸ್‌ನಲ್ಲಿ ಗುರುವಾರ ಆರೋಗ್ಯ ಇಲಾಖೆ ವತಿಯಿಂದ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳಿಗೆ 39ನೇ ನೇತ್ರದಾನ ಪಾಕ್ಷಿಕ ಮಾಹಿತಿ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ನೇತ್ರದಾನ ಪಾಕ್ಷಿಕವು ಇದೇ ಆಗಸ್ಟ್ 25 ರಿಂದ ಆರಂಭವಾಗಿದ್ದು, ಸೆಪ್ಟೆಂಬರ್ 10ರ ತನಕ ನಡೆಯುತ್ತಿದೆ. ನೇತ್ರದಾನದ ಮಹತ್ವ ಜಾಗೃತಿಗಾಗಿ ವಿವಿಧ ಕಾಲೇಜುಗಳಲ್ಲಿ ಸಾರ್ವಜನಿಕ ಸಭೆಯಲ್ಲಿ ಮಾಹಿತಿ ನೀಡಿ ಸಾರ್ವಕನಿಕರು ನೇತ್ರದಾನದಲ್ಲಿ ಭಾಗವಹಿಸುವಂತೆ ಪ್ರೇರಣೆ ನೀಡಲಾಗುತ್ತದೆ ಎಂದು ಹೇಳಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಮಾತನಾಡಿ, ತಮ್ಮ ನೇತ್ರಗಳು ಸದಾ ಜೀವಂತವಾಗಿರಲಿ. ನೇತ್ರದಾನ ನಿಮ್ಮ ಕುಟುಂಬದ ಸಂಪ್ರದಾಯವಾಗಲಿ. ಒಬ್ಬ ವ್ಯಕ್ತಿ ದಾನ ಮಾಡಿದ ನೇತ್ರಗಳು ಇಬ್ಬರು ಕಾರ್ನಿಯಾ ಅಂಧರಿಗೆ ದೃಷ್ಟಿ ನೀಡುತ್ತದೆ. ಪ್ರತಿ ವರ್ಷ ಸರಾಸರಿ 5600 ನೇತ್ರದಾನಗಳಾಗುತ್ತಿವೆ. ಅಂದಾಜು 1.25 ಲಕ್ಷ ಜನರು ಕಾರ್ನಿಯಾ ಸಂಬಂಧಿಸಿದ ಅಂಧತ್ವದಿಂದ ಬಳಲುತ್ತಿದ್ದು, ದಾನಕ್ಕಾಗಿ ಕಾಯುತ್ತಿರಿತ್ತಾರೆ. ನೇತ್ರದಾನ ಅತ್ಯುತ್ತಮ ಸೇವೆಯಾಗಿದ್ದು, ರಾಜ್ಯದಲ್ಲಿ 32 ನೇತ್ರ ಬ್ಯಾಂಕ್‌ಗಳು ಸೇವೆ ಸಲ್ಲಿಸುತ್ತಿವೆ ಎಂದು ತಿಳಿಸಿದರು.

ಚಿತ್ರದುರ್ಗ ನಗರದಲ್ಲಿ ಬಸವೇಶ್ವರ ಪೂರ್ಣ ಜ್ಯೋತಿ ನೇತ್ರ ಬ್ಯಾಂಕ್ ಬಸವೇಶ್ವರ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿದೆ. ವಯಸ್ಸು, ಬಣ್ಣ, ಲಿಂಗ, ಜಾತಿ, ರಕ್ತದ ಗುಂಪು ಯಾವುದೇ ಬೇಧವಿಲ್ಲದೇ ಎಲ್ಲರೂ ನೇತ್ರದಾನ ಮಾಡಬಹುದು. ವ್ಯಕ್ತಿಯ ಮರಣ ನಂತರ 6 ಗಂಟೆಯ ಒಳಗೆ ನೇತ್ರಗಳನ್ನು ಸಂಗ್ರಹಿಸಲಾಗುವುದು. ನೇತ್ರ ಸಂಗ್ರಹಣೆಗೆ ಬೇಕಾಗುವ ಸಮಯ 20 ನಿಮಿಷಗಳು ಸಂಗ್ರಹಣೆಯ ನಂತರ ಮೃತರ ಮುಖ ವಿಕಾರವಾಗುವುದಿಲ್ಲ. "ಜೀವಸಾರ್ಥಕತೆ" ವೆಬ್ ಪೋರ್ಟಲ್ ಮೂಲಕವು ನೇತ್ರದಾನ, ಅಂಗಾಂಗ ದಾನ ಮಾಡಬಹುದು. ವೆಬ್‌ಪೋರ್ಟಲ್ ಮೂಲಕ ಮನೆಯಲ್ಲಿಯೇ ಕುಳಿತು ದಾನ ಮಾಡಬಹುದು ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ, ಕಾಲೇಜಿನ ಪ್ರಾಂಶುಪಾಲ ವೆಂಕಟೇಶ ರೆಡ್ಡಿ, ಜಬ್ಬಾರ್ ಇದ್ದರು.

# ರಾಜ್ಯಪಾಲರ ಹುದ್ದೆ ರದ್ದುಗೊಳಿಸುವಂತೆ ಪ್ರತಿಭಟನೆ



» **ಚಿತ್ರದುರ್ಗ**

ಕೇಂದ್ರ ಬಿಜೆಪಿ. ಸರ್ಕಾರ ರಾಜ್ಯಪಾಲರ ಮೂಲಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಕೆಳಗಿಳಿಸುವ ಕುತಂತ್ರ ನಡೆಸುತ್ತಿರುವುದನ್ನು ವಿರೋಧಿಸಿ ಭಾರತ ಕಮ್ಯುನಿಸ್ಟ್ ಪಕ್ಷದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಜಯಣ್ಣ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು.

ದಾವಣಗೆರೆ ರಸ್ತೆಯಲ್ಲಿರುವ ಕಮ್ಯುನಿಸ್ಟ್ ಕಚೇರಿಯಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ರಾಜ್ಯಪಾಲರ ವಿರುದ್ದ ಧಿಕ್ಕಾರಗಳನ್ನು ಕೂಗಿದರು. ಮೂಡಾ ಪ್ರಕರಣ ಹಾಗೂ ವಾಲ್ಮೀಕಿ ಅಭಿವೃದ್ದಿ ನಿಗಮದಲ್ಲಿ ನಡೆದಿರುವ 187 ಕೋಟಿ ರೂ.ಗಳ ಹಗರಣವನ್ನು ನಿಸ್ಪಕ್ಷಪಾತವಾಗಿ ತನಿಖೆ ನಡೆಸಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ರಾಜ್ಯದ ಮುಖ್ಯ ಮಂತ್ರಿ ವಿರುದ್ದ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರು ಕೇಂದ್ರ ಬಿಜೆಪಿ. ಸರ್ಕಾರದ ಏಜೆಂಟರಂತೆ ವರ್ತಿಸುತ್ತಿರುವುದು ಸಂವಿಧಾನ ವಿರೋಧಿ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯಪಾಲರು ಒತ್ತಡಕ್ಕೆ ಮಣಿದು ತೀರ್ಮಾನ ಕೈಗೊಂಡಿರುವುದು ಸರಿಯಾದ ಕ್ರಮವಲ್ಲ. ಕೇರಳ, ತಮಿಳುನಾಡು, ಪಾಂಡಿಚೇರಿ, ಪಶ್ಚಿಮ ಬಂಗಾಳ, ರಾಜಸ್ಥಾನ ಇನ್ನು ಮುಂತಾದ ರಾಜ್ಯಗಳಲ್ಲಿ ರಾಜ್ಯಪಾಲರು ಹಾಗೂ ಚುನಾಯಿತ ಸರ್ಕಾರಗಳ ನಡುವೆ ಸಂಘರ್ಷ ನಡೆಯುತ್ತಿದೆ. ಅದೇ ರೀತಿ ಕರ್ನಾಟಕದಲ್ಲಿಯೂ ರಾಜ್ಯ ಸರ್ಕಾರವನ್ನು ಕೆಡವಲು ರಾಜ್ಯಪಾಲರು ಆಸಕ್ತಿ ವಹಿಸುತ್ತಿರುವುದರ ಹಿಂದೆ ಯಾರ್‍ಯಾರ ಕೈವಾಡವಿದೆ ಎನ್ನುವುದನ್ನು ಬಹಿರಂಗಪಡಿಸಿ ರಾಜ್ಯಪಾಲರ ಹುದ್ದೆಯನ್ನು ರದ್ದುಗೊಳಿಸುವಂತೆ ಪ್ರತಿಭಟನಾಕಾರರು ಆಗ್ರಹಿಸಿದರು. ಇದೇ ತಿಂಗಳ 29 ರಂದು ರಾಜ್ಯಪಾಲ ಹುದ್ದೆ ರದ್ದುಪಡಿಸಿ ಒಕ್ಕೂಟ ವ್ಯವಸ್ಥೆ ಉಳಿಸಿ ಎಂಬ ಪ್ರತಿಭಟನೆಯನ್ನು ರಾಜ್ಯಾದ್ಯಂತ ನಡೆಸಲಾಗುವುದೆಂದು ಭಾರತ ಕಮ್ಯುನಿಸ್ಟ್ ಪಕ್ಷ ರಾಜ್ಯ ಮಂಡಳಿ ಸದಸ್ಯ ಸಿ.ವೈ.ಶಿವರುದ್ರಪ್ಪ ಎಚ್ಚರಿಸಿದರು. ಸಿಪಿಐ. ಜಿಲ್ಲಾ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು, ಜಿಲ್ಲಾ ಮಂಡಳಿ ಸದಸ್ಯರುಗಳಾದ ಕಾಂ.ಬಿ.ಬಸವರಾಜಪ್ಪ, ಕಾಂ.ಟಿ.ಆರ್. ಉಮಾಪತಿ, ಸಹ ಕಾರ್ಯದರ್ಶಿ ದೊಡ್ಡುಳ್ಳಾರ್ತಿ ಕರಿಯಪ್ಪ, ಕಾಂ. ಜಾಫರ್‌ಷರೀಫ್, ಕಾಂ.ಎಸ್.ಸಿ.ಕುಮಾರ್, ಕಾಂ.ಎಲ್.ಸಿ.ಕುಮಾರ್, ಕಾಂ.ಅಮೀನಾಭಿ, ಕಾಂ.ಹನುಮಂತಪ್ಪ, ಕಾಂ.ಈ.ಸತ್ಯಕೀರ್ತಿ, ಕಾಂ. ಎಂ.ಬಿ.ಜಯದೇವಮೂರ್ತಿ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಜಯದೇವ ಮುರುಘರಾಜೇಂದ್ರ ಶ್ರೀ ಜಯಂತಿ ಆಚರಣೆ

» **ಚಿತ್ರದುರ್ಗ**



ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳು ಶಿಕ್ಷಣ ಮತ್ತು ದಾಸೋಹಕ್ಕೆ ಹೆಚ್ಚಿನ ಒತ್ತು ಕೊಟ್ಟಿದ್ದರು ಎಂದು ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಸಮೂಹ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಡಾ.ಕ.ಎಂ.ವಿರೇಶ್ ಸ್ಮರಿಸಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಮೈಸೂರು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಚಿತ್ರದುರ್ಗ, ಮಹಿಳಾ ಕದಳಿ ವೇದಿಕೆ ಸಹಯೋಗದೊಂದಿಗೆ ಬಾಪೂಜಿ ಸಮೂಹ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 109 ನೇ ಜಯಂತಿ ಪ್ರಯುಕ್ತ ಶರಣ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ ಹಾಗೂ ಜಯದೇವರ ಮುರುಘರಾಜೇಂದ್ರ ಮಹಾಸ್ವಾಮಿಗಳ 250 ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.ಸ್ವಾಮಿಗಳ ಭಕ್ತಿಪೂರ್ವಕ ಸೇವೆ ಹಾಗೂ ಸಮಾಜಕ್ಕೆ ಮಠ ಮಾನ್ಯಗಳು ನೀಡಿರುವ ಕೊಡುಗೆ ಕುರಿತು ಪ್ರಶಂಸಿಸಿದರು.

ಡಾ.ಪರಮೇಶ್ವರಪ್ಪ ಕುದುರಿ ಮಾತನಾಡುತ್ತ ಶಿಕ್ಷಣದ ವ್ಯವಸ್ಥೆ ಮತ್ತು ಶಿಕ್ಷಕನ ಕರ್ತವ್ಯವನ್ನು ಸ್ಮರಿಸಿ ಅಣಕು ಗೀತೆ ಮೂಲಕ ಮನರಂಜಿಸಿದರು.


ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ.ಎಂ.ಆರ್.ಜಯಲಕ್ಷ್ಮಿ ಅಧ್ಯಕ್ಷತೆ ವಹಿಸಿ ಮಾತನಾಡಿ ಮಠ ಮಾನ್ಯಗಳು ಶಿಕ್ಷಣ ಹಾಗೂ ದಾಸೋಹಕ್ಕೆ ಹೆಚ್ಚಿನ ಒತ್ತು ಕೊಡುತ್ತಿರುವುದರಿಂದ ಬಡ ಮಕ್ಕಳು ಶಿಕ್ಷಣವಂತರಾಗಲು ನೆರವಾಗಲಿದೆ ಎಂದು ಹೇಳಿದರು.ಉಪ ಪ್ರಾಚಾರ್ಯರಾದ ಶಿವಕುಮಾರ್ ಹೆಚ್.ಎನ್. ಉಪನ್ಯಾಸಕ ಡಾ.ಹನುಮಂತರೆಡ್ಡಿ, ಮಂಜುನಾಥ್, ಪ್ರಥಮ ಬಿ.ಇ.ಡಿ. ಮತ್ತು ದ್ವಿತೀಯ ಬಿ.ಇ.ಡಿ ವಿದ್ಯಾರ್ಥಿಗಳು ಜಯಂತಿಯಲ್ಲಿ ಭಾಗವಹಿಸಿದ್ದರು.

# ಸಹಾಯಕ ಪ್ರಾಧ್ಯಾಪಕ ಡಾ.ಹನುಮಂತಪ್ಪಗೆ ಪಿ.ಹೆಚ್.ಡಿ. ಪದವಿ



» **ಚಿತ್ರದುರ್ಗ**

ದಾವಣಗೆರೆ ಯು.ಬಿ.ಡಿ.ಟಿ.ಕಾಲೇಜಿನಲ್ಲಿ ಸಹಾಯಕ ಪ್ರಾಧ್ಯಾಪಕರಾಗಿರುವ ಡಾ.ಹನಮಂತಪ್ಪ ಎಸ್.ಎನ್. ಇವರಿಗೆ ಪಿ.ಹೆಚ್.ಡಿ. ಪದವಿ ಲಭಿಸಿದೆ.ಕೆ.ಎಸ್.ಎಸ್.ಇ.ಎಂ. ತಾಂತ್ರಿಕ ಕಾಲೇಜಿನ ಪ್ರೊ. ಡಾ.ಗಿರಿಶ್ರಿ ಅತ್ತಿಮರದ್‌ರವರ ಮಾರ್ಗದರ್ಶನದಲ್ಲಿ ಡಿಸೈನ್ ಆಫ್ ಎನರ್ಜಿ ಎಫಿಶಿಯೆಂಟ್ ಅಂಡ್ ಫಾಲ್ಟ್ ಟಾಲರೆಂಟ್‌ವೈರ್‌ಲೆಸ್ ಆಕ್ಚುವೇಟರ್ ಸೆನ್ಸಾರ್ ಎಂಬ ವಿಷಯದ ಬಗ್ಗೆ ಪ್ರಬಂಧ ಮಂಡಿಸಿರುವ ಡಾ.ಹನುಮಂತಪ್ಪ ಎಸ್.ಎನ್.ರವರಿಗೆ ಬೆಳಗಾವಿ ತಾಂತ್ರಿಕ ವಿಶ್ವವಿದ್ಯಾನಿಲಯದಲ್ಲಿ ನಡೆದ 24 ನೇ ವಾರ್ಷಿಕ ಘಟಿಕೋತ್ಸವದಲ್ಲಿ ಉಪ ಕುಲಪತಿ ಡಾ.ವಿದ್ಯಾಶಂಕರ್ ಪಿ.ಹೆಚ್.ಡಿ ಪದವಿ ಪ್ರದಾನ ಮಾಡಿದರು.ರಿಜಿಸ್ಟಾರ್‌ಗಳಾದ ರಂಗಸ್ವಾಮಿ, ಟಿ.ಎನ್.ಶ್ರೀನಿವಾಸ್ ಇವರುಗಳು ಪಿ.ಹೆಚ್.ಡಿ. ಪ್ರದಾನ ಸಮಾರಂಭದಲ್ಲಿ ಹಾಜರಿದ್ದರು.



**ಚಿತ್ರದುರ್ಗ ಶ್ರೀ ಮುರುಘರಾಜೇಂದ್ರ ಬೃಹನ್ಮಠದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ ಶಿವಯೋಗಿ ಸಿ ಕಳಸದ ಬೆಂಗಳೂರಿನಲ್ಲಿಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲರನ್ನು ಭೇಟಿಯಾಗಿ ಶರಣ ಸಂಸ್ಕೃತಿ ಉತ್ಸವ 2024 ಕಾರ್ಯಕ್ರಮಕ್ಕೆ ಆಹ್ವಾನಿಸಿದರು.**

## ಪ್ರಮುಖ ಸುದ್ದಿ

# ಗಣೇಶೋತ್ಸವ ಆಚರಣೆಯಲ್ಲಿ ಪೊಲೀಸ್ ನಿಯಮ ಮೀರಿದರೆ ಕಾನೂನು ಕ್ರಮ: ಪಿಎಸ್ಐ

» **ಚಳ್ಳಕೆರೆ**



ಪ್ರತಿವರ್ಷದಂತೆ ಈ ವರ್ಷವೂ ನಗರದ ವಿವಿಧ ಸಂಘಟನೆಗಳು ಸೆ.7ರಿಂದ ಶ್ರೀಗಣೇಶೋತ್ಸವ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲಿದ್ದು, ಕಾರ್ಯಕ್ರಮದಲ್ಲಿ ಸಂಘಟನೆಗಳು ನಿರ್ವಹಿಸಬೇಕಾದ ಜವಾಬ್ದಾರಿಯ ಬಗ್ಗೆ ಪೊಲೀಸ್ ಠಾಣೆಯಲ್ಲಿ ಶಾಂತಿಸಭೆಯನ್ನು ನಡೆಸಲಾಯಿತು.

ಉಪವಿಭಾಗದ ಡಿವೈಎಸ್ಪಿ, ಠಾಣಾ ವೃತ್ತ ನಿರೀಕ್ಷಕರ ಮಾರ್ಗದರ್ಶನದಲ್ಲಿ ಪಿಎಸ್ಐ ಜೆ.ಶಿವರಾಜ್ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಗಣೇಶೋತ್ಸವ ಆಚರಣೆ ಕಳೆದ ಹಲವಾರು ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿದೆ. ಈ ವರ್ಷವೂ ಸಹ ಹಬ್ಬ ಆರಂಭಕ್ಕೆ ಕೇವಲ ಹತ್ತು ದಿನಗಳ ಬಾಕಿ ಇವೆ. ಆದರೆ, ಗಣೇಶೋತ್ಸವ ನಡೆಸುವ ಎಲ್ಲಾ ಸಂಘಟನೆಗಳು ಪೊಲೀಸ್ ಇಲಾಖೆಯೂ ಸೇರಿದಂತೆ ವಿವಿಧ ಇಲಾಖೆಗಳ ನೀಡುವ ಮಾರ್ಗದರ್ಶನವನ್ನು ತಪ್ಪದೆ ಅನುಸರಿಸಬೇಕು. ಯಾವುದೇ ಹಂತದಲ್ಲಾಗಲಿ ಪೊಲೀಸ್ ಇಲಾಖೆಯ ನಿಯಮಗಳನ್ನು ಅನುಷ್ಠಾನಗೊಳಿಸದೇ ಇದ್ದಲ್ಲಿ ಅಂತಹ ಸಂಘಟನೆಗಳ ವಿರುದ್ದ ಅನಿವಾರ್ಯವಾಗಿ ಕಾನೂನು ಕ್ರಮ ಕೈಗೊಳ್ಳಬೇಕಾದೀತು. ಯಾರೂ ಸಹ ಇದಕ್ಕೆ ಅವಕಾಶ ನೀಡದೆ ವಿವಿಧ ಇಲಾಖೆಗಳು ನಿಬಂಧಿಸುವ ನಿಯಮಗಳನ್ನು ಪಾಲಿಸುವಂತೆ ಮನವಿ ಮಾಡಿದರು. ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ, ಸರ್ವಧರ್ಮ ಗಣೇಶೋತ್ಸವದ ಮುಖ್ಯಸ್ಥ ಹೊಯ್ಸಳಗೋವಿಂದ ಭಜರಂಗದಳದ ಉಮೇಶ್, ಮಹಂತೇಶ್, ಪಾಪಣ್ಣ, ಕೆ.ಎಂ. ಯತೀಶ್, ಮಾತೃಶ್ರೀಎನ್.ಮಂಜುನಾಥ, ಬಾಬು, ಆರ್.ವೀರಭದ್ರಪ್ಪ, ಹೊನ್ನೂರಸ್ವಾಮಿ ಮುಂತಾದವರು ಭಾಗವಹಿಸಿದ್ದರು.

# 18 ತುಂಬುತ್ತಿರುವ ಸಮಯದಲ್ಲಿ ಮಗನಿಗೆ ತಂದೆಯೊಬ್ಬನ ಬುದ್ಧಿ ಮಾತುಗಳು........



ಕಂದ ನೀನು ಇಂದಿನಿಂದ 18 ವರ್ಷ ತುಂಬಿದ ಕಾರಣಕ್ಕಾಗಿ ಈ ದೇಶದ ಒಬ್ಬ ಪ್ರಜೆಯಾಗಿ ಗುರುತಿಸಿಕೊಳ್ಳಬೇಕಾಗಿದೆ. ಈ ದೇಶದ ಎಲ್ಲಾ ಹಕ್ಕು ಮತ್ತು ಕರ್ತವ್ಯಗಳು ನಿನಗೆ ದೊರೆಯುತ್ತದೆ. ಅಷ್ಟೇ ಅಲ್ಲ ನೀನು ಒಬ್ಬ ಜವಾಬ್ದಾರಿಯುತ ನಾಗರೀಕನು, ಮತದಾರರನ್ನು ಸಹ ಆಗುತ್ತಿರುವೆ......

ಈ ಸಂದರ್ಭದಲ್ಲಿ ಒಬ್ಬ ತಂದೆಯಾಗಿ ನನಗೆ ಒಂದು ಕಡೆ ಹೆಮ್ಮೆ, ಇನ್ನೊಂದು ಕಡೆ ಆತಂಕವಾಗುತ್ತಿದೆ. ಮಗನೇ, ಈ 18 ವರ್ಷಗಳು ನೀನು ನನ್ನ ಕಣ್ಣಳತೆಯ ಮಿತಿಯಲ್ಲಿಯೇ ಬೆಳೆದಿರುವೆ. ಏಕೆಂದರೆ ಮಕ್ಕಳೆಂದರೆ ಅದು ತಂದೆ ತಾಯಿಯ ದೇಹದ ಮುಂದುವರಿದ ಭಾಗ. ಅದಕ್ಕೆ ಎಷ್ಟೇ ಪ್ರತ್ಯೇಕ ಅಸ್ತಿತ್ವವಿದ್ದರೂ ಮೂಲ ಮಾತ್ರ ತಂದೆ ತಾಯಿಯ ದೇಹದ ಮುಂದಿನ ಬೆಳವಣಿಗೆಯಾಗಿಯೇ ಗುರುತಿಸಲ್ಪಡುತ್ತದೆ ಮತ್ತು ಅದು ಅನುವಂಶಿಕವಾಗಿ ಬೆಳೆಯುತ್ತಿರುತ್ತದೆ......

ಇಂತಹ ಸಂದರ್ಭದಲ್ಲಿ ನೀನು ನನ್ನ ಮಗ ಎನ್ನುವುದಕ್ಕಿಂತ ಹೆಚ್ಚಾಗಿ ಇನ್ನು ಮುಂದೆ ನಿಮ್ಮ ಅಪ್ಪ ನಾನಾಗುತ್ತೇನೆ. ನಿನಗೆ ಯೌವ್ವನ ಚಿಗುರುತ್ತಾ ಸಾಗುತ್ತಿದ್ದರೆ, ನನಗೆ ಮುಪ್ಪು ಹತ್ತಿರವಾಗುತ್ತಾ ಇರುತ್ತದೆ. ನಿನ್ನ ಆರೋಗ್ಯ, ದೇಹ, ಮನಸ್ಸು ಬಲಿಷ್ಠವಾಗುತ್ತಿದ್ದರೆ, ನನ್ನ ದೇಹ, ಮನಸ್ಸು, ನಿಧಾನವಾಗಿ ಕುಸಿಯತೊಡಗುತ್ತದೆ. ನಿನ್ನ ನನ್ನ ವಯಸ್ಸಿನ ಅಂತರ ಕೇವಲ ಇಷ್ಟಕ್ಕೆ ನಿಲ್ಲುವುದಿಲ್ಲ. ಈ ನೆಲದ ಸಾಂಸ್ಕೃತಿಕ ವ್ಯಕ್ತಿತ್ವವು ಸಹ ನಮ್ಮಿಬ್ಬರ ಮಧ್ಯೆ ಸಾಕಷ್ಟು ಅಂತರವನ್ನು ಸೃಷ್ಟಿ ಮಾಡಿರುತ್ತದೆ. ನಿನ್ನ ಯೋಚನಾಲಹರಿ, ನನ್ನ ಯೋಚನೆ ಲಹರಿ ಸಾಕಷ್ಟು ಭಿನ್ನವಾಗಿರುವ ಎಲ್ಲ ಸಾಧ್ಯತೆಯೂ ಇರುತ್ತದೆ. ಇದು ವೈಯಕ್ತಿಕ ನಿಲುವುಗಳ ವ್ಯತ್ಯಾಸಗಳಾದರೆ, ಇನ್ನು ಸಾಮಾಜಿಕವಾಗಿ, ಆರ್ಥಿಕವಾಗಿ, ಪ್ರಾಕೃತಿಕವಾಗಿ ಸಾಕಷ್ಟು ವೈರುಧ್ಯಗಳು ನಮ್ಮ ನಡುವೆ ಏರ್ಪಟ್ಟಿದೆ.......

ಕಳೆದ 40/50 ವರ್ಷಗಳಿಗೆ ಹೋಲಿಸಿದರೆ ಗಾಳಿ, ನೀರು, ಆಹಾರ ಸಾಕಷ್ಟು ವಿಷಯುಕ್ತವಾಗಿದೆ. ಅದೇ ಸಮಯದಲ್ಲಿ ಮಾನವೀಯ ಮೌಲ್ಯಗಳು ದುರ್ಬಲವಾಗಿದೆ ಅಥವಾ ವ್ಯಾಪಾರಿಕರಣವಾಗಿದೆ. ಮನುಷ್ಯ ಸಂಬಂಧಗಳು ಮೊದಲಿನಷ್ಟು ಆಳ ಮತ್ತು ಗಟ್ಟಿತನವನ್ನು ಹೊಂದಿಲ್ಲ. ಬದುಕು ಎಂದಿನಂತೆ ಸರಳವಾಗಿಲ್ಲ, ಸಂಕೀರ್ಣವಾಗಿದೆ. ಅವಕಾಶಗಳು, ವೇದಿಕೆಗಳು ಸಂಪರ್ಕಗಳು ಹಿಂದಿನಂತಿಲ್ಲ. ಅದು ಸಾಕಷ್ಟು ಸಾಧ್ಯತೆಗಳನ್ನು ನಿನಗೆ ಕೊಡುತ್ತಿದೆ. ತಂತ್ರಜ್ಞಾನ, ಆಧುನಿಕತೆ ವೇಗವಾಗಿ ಬೆಳೆಯುತ್ತಿದೆ.....

ಇಂತಹ ಸನ್ನಿವೇಶದಲ್ಲಿ ನನ್ನ ಸಲಹೆಗಳು ನಿನಗೆ ಮಾರ್ಗದರ್ಶನವೂ ಆಗಬಹುದು ಅಥವಾ ನಿಯಂತ್ರಿತ ಮಿತಿಗಳು ಆಗಬಹುದು. ಏಕೆಂದರೆ ನನ್ನ ಸಲಹೆಗಳು ನೀನು ನನ್ನ ಮಗ ಎನ್ನುವ ಒಂದು ಮಿತಿಗೆ ಒಳಪಟ್ಟರೆ, ನನಗಾದ ಅನುಭವಗಳು ನಿನ್ನ ಮೇಲೆ ಹೇರಿಕೆಯೂ ಆಗಬಹುದು. ಆದರೂ ತಂದೆ ಎನ್ನುವ ಜವಾಬ್ದಾರಿ ಅರಿತು ಸಾಧ್ಯವಾದಷ್ಟು ನಿನ್ನ ಮನಸ್ಥಿತಿ, ಪರಿಸ್ಥಿತಿಯನ್ನ ಅರಿತು ಕೆಲವು ಸಲಹೆಗಳನ್ನು ಕೊಡಲು ಇಚ್ಚೆಸುತ್ತೇನೆ........

ಈ ವಯಸ್ಸಿನಲ್ಲಿ ಅದು ನಿನಗೆ ಅರ್ಥವಾಗಬಹುದು ಅಥವಾ ಅರ್ಥವಾಗದೆಯೂ ಇರಬಹುದು. ಅದನ್ನು ನೀನು ಸ್ವೀಕರಿಸಬಹುದು ಅಥವಾ ತಿರಸ್ಕರಿಸಬಹುದು ಅಥವಾ ನಿರ್ಲಕ್ಷಿಸಿಬಹುದು. ಆದರೂ ಮುಂದಿನ ದಿನಗಳಲ್ಲಿ ಈ ಸಲಹೆಗಳು ನಿನ್ನ ಉಪಯೋಗಕ್ಕೆ ಬರಬಹುದು ಎಂಬ ಭರವಸೆಯೊಂದಿಗೆ ಹೇಳುತ್ತಿದ್ದೇನೆ......

ಕಂದ, ನನ್ನ ಅಪ್ಪನ ಕಾಲಕ್ಕೆ ಸ್ವಾತಂತ್ರ್ಯ ಆಗತಾನೇ ಬಂದಿತ್ತು. ಅವರಿಗೆ ಕೇವಲ ಏಳು ರೂಪಾಯಿ ಸರ್ಕಾರಿ ಶಿಕ್ಷಕ ವೃತ್ತಿ ಸಿಕ್ಕಿತ್ತು. ನಮ್ಮ ಮನೆಯ ಬಾಡಿಗೆ ಎರಡು ರೂಪಾಯಿಗಳು. ಮಳೆ ಬಂದಾಗ ಮನೆ ತುಂಬಾ ನೀರು ಸೋರುತಿತ್ತು. ಆಗಾಗ ಹಾವು ಚೇಳುಗಳು ಮನೆಯೊಳಗೆ ನುಗ್ಗುತ್ತಿದ್ದವು. ನಮ್ಮ ಸ್ಥಳೀಯ ಆಹಾರದಂತೆ ಮುದ್ದೆಯೆ ನಮ್ಮ ದಿನನಿತ್ಯದ ಹಸಿವನ್ನು ತುಂಬಿಸುತ್ತಿದ್ದ ಭಕ್ಷ ಭೋಜನ. ಆಗಿನ ಕಾಲಕ್ಕೆ ಹಬ್ಬದಲ್ಲಿ ಅನ್ನ ತಿನ್ನುವುದು ಎಂಬುದು ಒಂದು ಗಾದೆ ಮಾತಾಗಿತ್ತು. ಸಿಹಿ ಅಥವಾ ಮಾಂಸಹಾರ ತೀರಾ ಅಪರೂಪ ಮತ್ತು ಅದೇ ಒಂದು ದೊಡ್ಡ ಸಂಭ್ರಮ. ಹೊಸ ಬಟ್ಟೆಗಳು ಯುಗಾದಿ ಹಬ್ಬಕ್ಕೆ ಮಾತ್ರವೇ ಸಿಗುತ್ತಿತ್ತು. ಸ್ನಾನ ಬಹುತೇಕ ವಾರಕ್ಕೆ ಒಂದು ದಿನ, ಅದು ಸಹ ಶನಿವಾರವೇ ಆಗಿರುತ್ತಿತ್ತು.. ಮನೆಯ ಎಲ್ಲರೂ ಒಂದೇ ಚಾಪೆಯಲ್ಲಿ ಒಂದೇ ಕಂಬಳಿಯನ್ನು ಹೊಂದು ಮಲಗುತ್ತಿದ್ದೆವು.......

ಹಸಿವೆಂಬುದು ಸದಾ ಕಾಡುತ್ತಿತ್ತು. ಏಕೆಂದರೆ ಆಗಿನ ದೈಹಿಕ ಚಟುವಟಿಕೆಗೆ ಮನೆಯಲ್ಲಿ ಮಾಡುತ್ತಿದ್ದ ಆಹಾರ ಅಥವಾ ಶಾಲೆಯಲ್ಲಿ ಕೊಡುತ್ತಿದ್ದ ಉಪ್ಪಿಟ್ಟು ಸಾಕಾಗುತ್ತಿರಲಿಲ್ಲ. ಎಲ್ಲೋ ಮದುವೆಯೋ ಅಥವಾ ಊರಿನ ಜಾತ್ರೆಯೋ ನಡೆದರೆ ಅಲ್ಲಿ ಸಿಗುತ್ತಿದ್ದ ಆಹಾರವೇ ನಮಗೆ ಮೃಷ್ಟಾನ್ನ.....

ಆಗ ನಮ್ಮ ತಂದೆಯವರ ಆದ್ಯತೆ ನಮ್ಮ ಮಕ್ಕಳನ್ನ ಕನಿಷ್ಠ ಎಸ್ ಎಸ್ ಎಲ್ ಸಿ ಅಥವಾ ಪಿಯುಸಿ ಸಾಧ್ಯವಾದರೆ ಒಂದು ಪದವಿಯನ್ನು ಮಾಡಿಸಿ, ಏನಾದರೂ ಸರ್ಕಾರಿ ಉದ್ಯೋಗ ಸಿಕ್ಕಿ, ಮಗ ನಗರದಲ್ಲಿ ಸ್ವತಂತ್ರ ಜೀವನ ಸಾಗಿಸಿದರೆ ಸಾಕು ಎಂದು ತುಂಬಾ ಆಸೆ ಪಡುತ್ತಿದ್ದರು.



ಕೃಷಿ ಅಥವಾ ಖಾಸಗಿ ವ್ಯವಹಾರ ಅಷ್ಟೇನೂ ಲಾಭದಾಯಕವಾಗಿರಲಿಲ್ಲ. ಅದರಿಂದ ಇವನ ಬದುಕು ಸಾಗುವುದು ಕಷ್ಟ. ಸರ್ಕಾರಿ ಉದ್ಯೋಗ ದೊರಕಿದರೆ ಜೀವನಕ್ಕೆ ಶಾಶ್ವತವಾಗಿ ಒಂದು ದಾರಿ ಆಗುತ್ತದೆ ಎಂಬ ಆಸೆ ಅವರದಾಗಿತ್ತು....

ಮಗನೇ ಈಗ ಕಾಲ ಅಥವಾ ಸಾಮಾಜಿಕ ವಾತಾವರಣ ಸಂಪೂರ್ಣ ಬದಲಾಗಿದೆ. ಅಂದು ನಾನು ನಗರಕ್ಕೆ ಬಂದು ಸಾಕಷ್ಟು ಸಂಘರ್ಷಗಳ ನಡುವೆ ಪ್ರತಿಕ್ಷಣ ಶ್ರಮ ಪಡುತ್ತಾ ಜವಾಬ್ದಾರಿಯಿಂದ ಬದುಕು ನಿರ್ವಹಿಸಲು ತುಂಬಾ ಕಷ್ಟವಾಯಿತು. ಹೇಗೋ ಒಂದು ಹಂತ ತಲುಪಿದ ಮೇಲೆ ನೀನು ಜನಿಸಿದೆ. ಆಗ ನನ್ನೆಲ್ಲಾ ಕಷ್ಟಗಳು ನಿನಗೆ ಬಾಧಿಸದಿರಲೆಂದು ನಿನ್ನನ್ನು ಹೆಚ್ಚು ಪ್ರೀತಿಯಿಂದ ಯಾವುದೇ ನೋವಾಗದಂತೆ, ನೀನು ಕಷ್ಟ ಪಡದಂತೆ ಸಾಕಬೇಕೆಂದು ಬಯಸಿ ಹಾಗೆಯೇ ನೋಡಿಕೊಳ್ಳುತ್ತಿದ್ದೆ. ನೀನು ಗಣಿತದ ಲೆಕ್ಕಗಳು ಹೇಳು, ನಾನು ಕೂಡಿ ಕಳೆದು ಗುಣಿಸುವುದು ಮಾಡುತ್ತೇನೆ ಎಂದಾಗ, ನಾನು ಅತ್ಯಂತ ಸರಳ ಸಂಖ್ಯೆಗಳನ್ನು ಕೊಡುತ್ತಿದ್ದೆ. ಏಕೆಂದರೆ ಸಂಕೀರ್ಣ ಸಂಖ್ಯೆಗಳನ್ನು ನೀಡಿದರೆ ನೀನು ಎಲ್ಲಿ ಕಷ್ಟ ಪಡುತ್ತಿಯೋ ಎನ್ನುವಷ್ಟು ತೀವ್ರವಾಗಿ ನಿನ್ನನ್ನು ಪ್ರೀತಿಸುತ್ತಿದ್ದೆ......

ಆದರೆ ಜಾಗತೀಕರಣದ ನಂತರ ಬದುಕು ಅಷ್ಟು ಸುಲಭವಾಗಿ ಮುನ್ನಡೆಯಲು ಸಾಧ್ಯವಾಗುತ್ತಿಲ್ಲ. ಅನೇಕ ಎರಡು ತೊಡರುಗಳು, ಆರ್ಥಿಕ ಸಂಕಷ್ಟಗಳು ನನ್ನನ್ನು ಕಾಡಲು ಪ್ರಾರಂಭಿಸಿದೆ. ಇಂತಹ ಸಂದರ್ಭದಲ್ಲಿ ನೀನು ಈಗಿನ ಸಾಮಾಜಿಕ ಪರಿಸ್ಥಿತಿಯಲ್ಲಿ ದೊಡ್ಡ ದೊಡ್ಡ ಕನಸುಗಳನ್ನು, ಯಶಸ್ಸನ್ನು ಬಯಸುತ್ತಿರುವೆ. ನನ್ನ ದೃಷ್ಟಿಕೋನದ ಯಶಸ್ಸಿಗೂ, ನಿನ್ನ ದೃಷ್ಟಿಕೋನದ ಯಶಸ್ಸಿಗೂ ಸಾಕಷ್ಟು ವ್ಯತ್ಯಾಸ ಇದೆ. ಕೇವಲ ವೈಯಕ್ತಿಕ ನೆಲೆಯಲ್ಲಿ ಮಾತ್ರವಲ್ಲ ಸಾಮಾಜಿಕವಾಗಿ ಸಹ ಇಂದು ವಸ್ತು ಸಂಸ್ಕೃತಿ, ಕೊಳ್ಳುಬಾಕ ಸಂಸ್ಕೃತಿ, ಹೋಲಿಕೆಯ ಸಂಸ್ಕೃತಿ, ಅಪ ಮೌಲ್ಯಗೊಂಡ ಸಂಸ್ಕೃತಿ, ನಿನ್ನನ್ನು ಅಕ್ರಮಿಸಿಕೊಂಡಿವೆ. ಕಾಲದ ಪಯಣದಲ್ಲಿ ಈ ಬದಲಾವಣೆಗಳು ಸಹಜವೇನೋ ನಿಜ. ಆದರೆ ಆ ಬದಲಾವಣೆಗಳು ನಿನ್ನ ಭವಿಷ್ಯವನ್ನು ಮುಸುಕಾಗಿಸಬಹುದು, ಈ ವ್ಯವಸ್ಥೆ ಇನ್ನೂ ಸಂಕೀರ್ಣ ಸಂಘರ್ಷಮಯವಾಗಿ ನಿನ್ನ ನೆಮ್ಮದಿಯನ್ನು ಕಸಿದುಕೊಳ್ಳಬಹುದು, ನಿನ್ನ ಆರೋಗ್ಯವನ್ನು ಹಾಳುಮಾಡಬಹುದು ಎಂಬ ಆತಂಕ ಇರುವುದಂತೂ ನಿಜ......

ಬಹುಶಃ ಹಿಂದೆ ನಮ್ಮ ತಂದೆ ತಾಯಿಗಳು ಇದೇ ರೀತಿ ಆತಂಕ ಪಟ್ಟಿರಬಹುದು. ಮುಂದಿನ ಭವಿಷ್ಯ ಹೇಗಾಗುತ್ತದ್ದೋ ತಿಳಿದಿಲ್ಲ. ಆದರೆ ಈ ಕ್ಷಣದಲ್ಲಿ ಯೋಚಿಸಿದಾಗ ಮುಂದಿನ ದಿನಗಳು ನೀನು ತಿಳಿದಿರುವುದಕ್ಕಿಂತ ಹೆಚ್ಚು ಸವಾಲುಗಳನ್ನು ನೀಡಬಹುದು ಎಂದು ಅನಿಸುತ್ತಿದೆ. ಮಗನೇ, ಇಂದು ಜಗತ್ತು ತುಂಬಾ ಸ್ಪರ್ಧಾತ್ಮಕವಾಗಿದೆ. ಹಾಗೆಯೇ ಮನುಷ್ಯ ಸಂಬಂಧಗಳು ಶಿಥಿಲವಾಗಿ, ಹಣ ಕೇಂದ್ರೀಕೃತವಾಗುತ್ತಿದೆ. ಇದು ಒಳ್ಳೆಯ ಬೆಳವಣಿಗೆಯಲ್ಲ. ಇದರಿಂದಾಗಿ ದೇಹ, ಮನಸ್ಸುಗಳು ಸಾಕಷ್ಟು ಒತ್ತಡಕ್ಕೆ ಸಿಲುಕುತ್ತವೆ. ಬಹುತೇಕ ಯಶಸ್ಸಿಗಿಂತ ನಿರಾಸೆಗಳು, ಅಸಹಾಯಕತೆಗಳೇ ಮನೆಮಾಡುತ್ತವೆ.....

ಸಾಮೂಹಿಕ ಯಶಸ್ಸನ್ನು ಯಾರು ಬಯಸುತ್ತಿಲ್ಲ. ಕೆಲವೇ ಕೆಲವರ ವೈಯಕ್ತಿಕ ಯಶಸ್ಸು ಸಮಾಜದಲ್ಲಿ ಅಂತರವನ್ನು ಹೆಚ್ಚಿಸುತ್ತಿದೆ. ಹಂಚಿಕೊಂಡು ತಿನ್ನುವ ಪರಿಸ್ಥಿತಿ ಮಾಯವಾಗಿ ಕಿತ್ತುಕೊಂಡು ತಿನ್ನುವ ಅನಾಗರಿಕ ವರ್ತನೆಗಳು ಸಮಾಜದಲ್ಲಿ ಸಹಜವಾಗುತ್ತಿವೆ. ಇಂತಹ ಸನ್ನಿವೇಶದಲ್ಲಿ ನಾನು ಗೊಂದಲಕ್ಕೆ ಒಳಗಾಗಿದ್ದೇನೆ......

ಒಳ್ಳೆಯದು ಒಳ್ಳೆಯದಾಗಿಯೇ ಇಲ್ಲದಿರುವಾಗ, ಒಳ್ಳೆಯವರು ಬದುಕುವುದೇ ಕಷ್ಟವಾಗುತ್ತಿರುವಾಗ, ಕೆಟ್ಟವರು ಸಮಾಜದಲ್ಲಿ ವಿಜೃಂಭಿಸುತ್ತಿರುವಾಗ, ಕೆಟ್ಟವರೇ ಜನಪ್ರಿಯತೆ, ವ್ಯಾವಹಾರಿಕ ಯಶಸ್ಸನ್ನು ಪಡೆಯುತ್ತಿರುವಾಗ, ಅದರ ಸಂಪೂರ್ಣ ವಿವರಗಳು ನನಗೆ ಸ್ಪಷ್ಟವಾಗಿ ತಿಳಿದಿರುವಾಗ, ನಾನು ನಿನಗೆ ಏನೆಂದು ಮಾರ್ಗದರ್ಶನ ಮಾಡಬೇಕು. ಸತ್ಯ, ಪ್ರಾಮಾಣಿಕ, ನಿಷ್ಠೆ, ಮಾನವಿಯ ಮೌಲ್ಯಗಳನ್ನು ನಿನಗೆ ಭೋದಿಸಬೇಕೇ ಅಥವಾ ಸಾಂದರ್ಭಿಕವಾಗಿ ಏನನ್ನಾದರೂ ಮಾಡಿ ಜೀವನದಲ್ಲಿ ಯಶಸ್ಸನ್ನು ಪಡೆ ಎಂದು ಹೇಳಬೇಕೇ ಈ ಎರಡರ ನಡುವೆ ನನಗೂ ಗೊಂದಲಗಳಿವೆ.....


ಏಕೆಂದರೆ ಒಳ್ಳೆಯದನ್ನು ಹೇಳುವುದು ತುಂಬಾ ಸುಲಭ. ಆದರೆ ಅದನ್ನು ಅನುಸರಿಸುವ ಮನಸ್ಥಿತಿ ನಿನ್ನದಾಗಿದ್ದರೆ ತುಂಬಾ ಸಂತೋಷ. ಇಲ್ಲದಿದ್ದರೆ ಆ ಸೂತ್ರಗಳು ನಿನ್ನ ಅಪ ಯಶಸ್ಸಿಗೆ ಕಾರಣವಾಗಿ ಅದರ ಹೊಣೆಗಾರ ನಾನಾಗುತ್ತೇನೇನೋ ಎನ್ನುವ ಅಳುಕು ಸಹ ನನಗಿದೆ. ಅಂದಿನ ಆ ಸಾಮಾಜಿಕ ವಾತಾವರಣ ಮಾಯವಾಗಿದೆ. ಸಕ್ಸಸ್ ಅಟ್ ಎನಿಕಾಸ್ಟ್ ಎನ್ನುವ ಸೂತ್ರ ಈಗ ಚಲಾವಣೆಯಲ್ಲಿದೆ. ಒಳ್ಳೆಯ ಮಾರ್ಗದಲ್ಲಿ ಯಶಸ್ವಿಯಾಗಿ ಮುನ್ನಡೆ ಎಂದು ಧೈರ್ಯವಾಗಿ ಹೇಳುವ ಸ್ಥಿತಿಯಲ್ಲಿ ನಾನಿಲ್ಲ. ಹಾಗೆಂದು ಕೆಟ್ಟವನಾಗು ಎನ್ನುವುದು ಮತ್ತಷ್ಟು ತಪ್ಪಾಗುತ್ತದೆ....

ಮಗನೇ ನಾನೇನೋ ವ್ಯಾವಹಾರಿಕ ಜಗತ್ತಿನಿಂದ ಹೊರಬಂದು ಸಾಮಾಜಿಕ ಪರಿವರ್ತನೆಗಾಗಿ ಯಾವ ನಿರೀಕ್ಷೆಯು ಇಲ್ಲದೆ ಕೆಲಸ ಮಾಡುತ್ತಿದ್ದೇನೆ. ಹಾಗೆಂದು ನಿನ್ನನ್ನು ನಿರ್ಲಕ್ಷಿಸಲು ಸಾಧ್ಯವಾಗುತ್ತಿಲ್ಲ ಅಥವಾ ನಿನಗಾಗಿಯೇ ನನ್ನ ಬದುಕನ್ನು ಸವೆಸಲು ಸಾಧ್ಯವಾಗುತ್ತಿಲ್ಲ. ನನ್ನ ಮಗ ಮತ್ತು ಈ ಸಮಾಜದ ಆಯ್ಕೆಯಲ್ಲಿ ಅನಿವಾರ್ಯವಾಗಿ ಸಮಾಜವನ್ನೇ ಆಯ್ಕೆ ಮಾಡಿಕೊಂಡಿದ್ದೇನೆ. ಇದರ ನಡುವೆ ನಿನ್ನನ್ನು ಸರಿಯಾಗಿ ಬೆಳೆಸದ ಆರೋಪ ನನ್ನ ಮೇಲೆ ಸಹಜವಾಗಿಯೇ ಬರುತ್ತದೆ.....

ಒಬ್ಬ ಮಗನಿಗಾಗಿ ಹೆಚ್ಚು ಶ್ರಮಪಡಲು ಅಥವಾ ಮಗನ ಬದುಕನ್ನು ನಿರ್ಲಕ್ಷಿಸಿ ಅಥವಾ ಸವಾಲಿಗೆ ಒಡ್ಡಿ ಇಡೀ ಸಮಾಜದ ಪರಿವರ್ತನೆಗಾಗಿ ಪ್ರಯತ್ನಿಸುವ ಆಯ್ಕೆಯಲ್ಲಿ ಸಮಾಜವನ್ನೇ ಆಯ್ಕೆ ಮಾಡಿಕೊಂಡಿರುವ ಬಗ್ಗೆ ನನಗೆ ಆತ್ಮ ತೃಪ್ತಿ ತಂದಿದೆ. ಇದರ ನಡುವೆ ನೀನು 18 ದಾಟುತ್ತಿದ್ದೀಯಾ. ನಿನ್ನ ಬೇಡಿಕೆಗಳು ಇಂದಿನ ಎಲ್ಲ ಸಾಮಾನ್ಯ ಯುವ ಜನಾಂಗದಂತೆ ಸಾಕಷ್ಟು ಕನಸುಗಳನ್ನು ಹೊಂದಿವೆ. ಕರುಳ ಬಳ್ಳಿಯ ಮೂಲೆಯಲ್ಲಿ ನಿನ್ನ ಆಸೆಗಳಿಗೆ ಸ್ಪಂದಿಸಬೇಕೆಂದು ಸಾಕಷ್ಟು ಮನಸ್ಸು ಕಾಡುತ್ತದೆ. ಅದಕ್ಕಾಗಿ ಸಣ್ಣ ಪ್ರಯತ್ನಗಳು ಇದೆ. ಆದರೆ ಅದನ್ನು ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಅದಕ್ಕಾಗಿ ಕ್ಷಮೆ ಇರಲಿ......

ಹೇಳಲು ಇನ್ನೂ ಸಾಕಷ್ಟು ಇದೆ. ಆದರೆ ನನ್ನ ಬುದ್ಧಿಮಾತುಗಳು ಇವತ್ತಿಗೆ ಮಾತ್ರ ಮುಗಿಯುವುದಿಲ್ಲ. ಅದು ನಿರಂತರ. ಕೊನೆಯದಾಗಿ ಒಂದು ಕಿವಿಮಾತು ಮಗನೇ, ನೀನು ಸುಖವಾಗಿ, ನೆಮ್ಮದಿಯಿಂದ, ಸಂತೋಷವಾಗಿ ಇರುವಾಗ ನನ್ನ ನೆನಪಾಗದಿದ್ದರೂ ಚಿಂತೆ ಇಲ್ಲ. ನನ್ನ ಮುಪ್ಪಿನ ಸಮಯದಲ್ಲಿ ನೀನು ನನಗೆ ನೆರವಾಗದಿದ್ದರೂ ಪರವಾಗಿಲ್ಲ. ಆದರೆ ನಿನ್ನ ಸಂಕಷ್ಟದ ಸಮಯದಲ್ಲಿ. ನಿನ್ನ ನೋವಿನ ಸಂದರ್ಭದಲ್ಲಿ, ನನ್ನ ನೆನಪಾದರೆ ಅಷ್ಟೇ ಸಾಕು. ನಾನು ಬದುಕಿದ್ದರೆ ನಿನಗೆ ಸಹಾಯವನ್ನು, ಸಲಹೆ ಸೂಚನೆಯನ್ನು ನೀಡುತ್ತೇನೆ. ಇಲ್ಲದಿದ್ದರೆ ನನ್ನ ಈ ತಿಳುವಳಿಕೆಯ ಮಾತುಗಳಾದರು ನಿನಗೆ ನೆನಪಾಗಲಿ....

ಒಳ್ಳೆಯದಾಗಲಿ ಮಗ..... ಪ್ರಬುದ್ಧ ಮನಸ್ಸು ಪ್ರಭುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T